


Volume : 9 | Issue : 174 | September : 27 : 2026 : Sunday

ಸಂಪುಟ : 9 | ಸಂಚಿಕೆ : 174 | ಸೆಪ್ಟಂಬರ್ : 27 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 || ಕನ್ನಡ ದಿನಪತ್ರಿಕೆ ||

VIKRAMA VAHINI

PRGI NO: KARKAN/2018/78481




ತಾಪ್ಸಿ ಪನ್ನು ಅವರು ಸಂದರ್ಶನವೊಂದರಲ್ಲಿ, ಚಿತ್ರದ ನಾಯಕನ ಪತ್ನಿಗೆ ತಾವು ಇಷ್ಟವಾಗದ ಕಾರಣ ಡೇಟ್ಸ್ ನೀಡಿದ ಬಳಿಕವೂ ಸಿನಿಮಾದಿಂದ ಕೈಬಿಡಲಾಗಿತ್ತು ಎಂದು ಹೇಳಿಕೊಂಡಿದ್ದಾರೆ. ಈ ಕಾರಣವು ಸಿನಿಮಾ ಅವಕಾಶ ಕಳೆದುಕೊಳ್ಳಲು ತಾವು ಕೇಳಿದ ಅತ್ಯಂತ ಕಳಪೆ ಕಾರಣಗಳಲ್ಲಿ ಒಂದಾಗಿತ್ತು ಎಂದು ನಟಿ ತಿಳಿಸಿದ್ದಾರೆ.

ಹೋಮ್‌ಸ್ಟೇನಲ್ಲಿ ಯುವತಿ ಶವ ಪತ್ತೆ; ಪ್ರಿಯಕರ ಬಂಧನ ಪುಟ 3

ಎಸ್‌ಐಆರ್ ಮುಂದಿಟ್ಟುಕೊಂಡು ರಾಹುಲ್ ಗಾಂಧಿ ನಾಟಕ ಪುಟ 4

**ಚುನಾವಣಾ ಆಯೋಗದ ಸ್ವಾಯತ್ತತೆ ಪ್ರಶ್ನಿಸಿ ಕಾಂಗ್ರೆಸ್ ಪ್ರತಿಭಟನೆ ನಡೆಸಿದ್ದು, ಸಿಇಸಿ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಿ ತನಿಖೆ ನಡೆಸಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಆಗ್ರಹಿಸಿದರು. ಎಸ್‌ಐಆರ್ ರದ್ದುಪಡಿಸಿ ಮತದಾರರ ಹಕ್ಕು ರಕ್ಷಿಸುವಂತೆ ಒತ್ತಾಯಿಸಿದರು. ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಹಾಗೂ ಆಯೋಗ ಸಂವಿಧಾನಕ್ಕೆ ಮಾತ್ರ ನಿಷ್ಠವಾಗಿರಬೇಕು ಎಂದು ನಾಯಕರು ಒತ್ತಾಯಿಸಿದರು. ಎಸ್‌ಐಆರ್ ವಿರೋಧಿ ಹೋರಾಟವನ್ನು ಗ್ರಾಮ ಮಟ್ಟಕ್ಕೂ ವಿಸ್ತರಿಸುವುದಾಗಿ ತಿಳಿಸಿದರು.**




● ವಿಕ್ರಮ ವಾಹಿನಿ । ಬೆಂಗಳೂರು

"ಚುನಾವಣಾ ಆಯೋಗ ಬಿಜೆಪಿಯ ಕೈಗೊಂಬೆಯಾಗಿದೆ. ಬಡ ಹಾಗೂ ಆಡಳಿತ ವ್ಯವಸ್ಥೆ ಟೀಕಿಸುವ ಮತದಾರರ ಹೆಸರನ್ನು ಗುರಿಯಾಗಿಸಲಾಗಿದೆ. ಬಿಜೆಪಿ ಜೊತೆ ಸೇರಿ ಮತಗಳ್ಳತನಕ್ಕೆ ಪಾಲುದಾರರಾಗಿದ್ದಾರೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ವಾಗ್ದಾಳಿ ನಡೆಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಆಗ್ರಹಿಸಿ ಕೆಪಿಸಿಸಿ ವತಿಯಿಂದ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಶನಿವಾರ ನಡೆದ ಪ್ರತಿಭಟನಾ ಸಮಾವೇಶದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು.



"ರಾಷ್ಟ್ರಪತಿಗಳು ಮಧ್ಯಪ್ರವೇಶಿಸಿ ಚುನಾವಣಾ ಆಯೋಗವನ್ನು ವಿಸರ್ಜಿಸಬೇಕು. ಮುಖ್ಯ ಆಯುಕ್ತರನ್ನು ಬಂಧಿಸಬೇಕು ಹಾಗೂ ಅಕ್ರಮವಾಗಿ ನಡೆದ ಚುನಾವಣೆಗಳನ್ನು ರದ್ದು ಮಾಡಬೇಕು. ಸಂವಿಧಾನದ ಮೂಲಕ ಈ ದೇಶದ ಚುನಾವಣಾ ಆಯೋಗಕ್ಕೆ ಸ್ವಾಯತ್ತತೆ ಅಧಿಕಾರ ನೀಡಲಾಗಿತ್ತು. ಅದನ್ನು ದುರುಪಯೋಗ ಪಡಿಸಿಕೊಳ್ಳಲಾಗಿದೆ. ಇದಕ್ಕೆ ಸೂಕ್ತ ಸಾಕ್ಷಿಗಳೂ ಕಾಣುತ್ತಿವೆ" ಎಂದರು.

"ಜ್ಞಾನೇಶ್ ಕುಮಾರ್ ಅವರು ಚೀಫ್ ಎಲೆಕ್ಷನ್ ಕಮಿಷನರ್ ಅಲ್ಲ, ಚೀಫ್ ಸೆಲೆಕ್ಷನ್ ಕಮಿಷನರ್ ಆಗಿದ್ದೀರಿ. ಜನ ನಿಮ್ಮ ಅನ್ಯಾಯಗಳ ವಿರುದ್ಧ ದಂಗೆ ಏಳುತ್ತಾರೆ. ಕೇಂದ್ರ ಸರ್ಕಾರ ಅಧಿವೇಶನ ಕರೆದು ಇದರ ಬಗ್ಗೆ ಶೀಘ್ರ ಚರ್ಚೆ ನಡೆಸಬೇಕು.

ಅಧಿಕಾರದ ವ್ಯಾಮೋಹ ಜಾಸ್ತಿ ದಿನ ಇರುವುದಿಲ್ಲ. ಹುಟ್ಟಿದ ಸೂರ್ಯ ಮುಳುಗಲೇಬೇಕು. ಈಗ ನಡೆದಿರುವ ಎಸ್ ಐಆರ್ ರದ್ದುಗೊಳ್ಳಬೇಕು. ಹೊಸದಾಗಿ ಮರು ಪರಿಶೀಲನೆ ನಡೆಯಬೇಕು" ಎಂದರು. 2ನೇ ಪುಟಕ್ಕೆ...




## 30ರಂದು ಇಂಡಿಯಾ ಒಕ್ಕೂಟ ಸಭೆ

**ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆ ಹಾಗೂ ಎಸ್‌ಐಆರ್ ವಿರುದ್ಧದ ಮುಂದಿನ ಹೋರಾಟದ ರೂಪುರೇಷೆ ಕುರಿತು ಚರ್ಚಿಸಲು ಇಂಡಿಯಾ ಒಕ್ಕೂಟ ಸೆ.30ರಂದು ನವದೆಹಲಿಯಲ್ಲಿ ಸಭೆ ಸೇರಲಿದೆ. ಸಂಸತ್ತಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆಯೂ ಮಿತ್ರಪಕ್ಷಗಳು ಸಮಾಲೋಚನೆ ನಡೆಸಲಿವೆ.**

● ವಿಕ್ರಮ ವಾಹಿನಿ । ನವದೆಹಲಿ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಎಸ್‌ಐಆರ್ ಪ್ರಕ್ರಿಯೆ ಕುರಿತು ಮುಂದಿನ ಕಾರ್ಯತಂತ್ರ ರೂಪಿಸಲು ಇಂಡಿಯಾ ಒಕ್ಕೂಟದ ಮಿತ್ರಪಕ್ಷಗಳು ಸೆಪ್ಟೆಂಬರ್ 30ರಂದು ನವದೆಹಲಿಯಲ್ಲಿ ಸಭೆ ಸೇರಲಿವೆ. ಸಭೆಯಲ್ಲಿ ಜ್ಞಾನೇಶ್ ಕುಮಾರ್ ವಿರುದ್ಧ ಸಂಸತ್ತಿನಲ್ಲಿ ತೆಗೆದುಕೊಳ್ಳಬೇಕಾದ ಮುಂದಿನ ಕ್ರಮಗಳ ಬಗ್ಗೆಯೂ ಚರ್ಚೆ ನಡೆಯುವ ಸಾಧ್ಯತೆಯಿದೆ.

ಎಸ್‌ಐಆರ್ ಕುರಿತಂತೆ ಚುನಾವಣಾ ಆಯೋಗದಲ್ಲಿ ಭಿನ್ನಾಭಿಪ್ರಾಯಗಳಿದ್ದವು ಎಂಬ ವರದಿಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸೇರಿದಂತೆ ಹಲವು ವಿಪಕ್ಷಗಳು ಸಿಇಸಿ ರಾಜೀನಾಮೆಗೆ ಆಗ್ರಹಿಸಿವೆ. ಸಿಪಿಐ(ಎಂ), ಸಿಪಿಐ ಹಾಗೂ ಸಿಪಿಐ(ಎಂಎಲ್) ಲಿಬರೇಶನ್ ಸೇರಿದಂತೆ ಪಕ್ಷಗಳು ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆಗೆದುಹಾಕಬೇಕು ಮತ್ತು ಎಸ್‌ಐಆರ್ ಪ್ರಕ್ರಿಯೆ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿವೆ.

ಈ ನಡುವೆ, ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸೆಪ್ಟೆಂಬರ್ 29ರಂದು ಸಭೆ ಸೇರಲಿದ್ದು, ಚುನಾವಣಾ ಆಯೋಗದ ವಿಚಾರದಲ್ಲಿ ಪಕ್ಷದ ಮುಂದಿನ ಕಾರ್ಯತಂತ್ರದ ಕುರಿತು ಚರ್ಚಿಸಲಿದೆ. ಇಂಡಿಯಾ ಒಕ್ಕೂಟದ ಸಭೆಯಲ್ಲಿ ಸಿಇಸಿ ವಿರುದ್ಧ ಸಂಸತ್ತಿನಲ್ಲಿ ಮಂಡಿಸಲು ಉದ್ದೇಶಿಸಿರುವ ಪ್ರಸ್ತಾವನೆ ಕುರಿತು ಸಮನ್ವಯ ಸಾಧಿಸುವ ನಿರೀಕ್ಷೆಯಿದೆ. 2ನೇ ಪುಟಕ್ಕೆ...

## ಎಸ್‌ಐಆರ್ ನಿರ್ಧಾರದಲ್ಲಿ ಭಿನ್ನಾಭಿಪ್ರಾಯವಿಲ್ಲ: ಚುನಾವಣಾ ಆಯೋಗ

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿಚಾರದಲ್ಲಿ ಚುನಾವಣಾ ಆಯೋಗದೊಳಗೆ ಯಾವುದೇ ಭಿನ್ನಾಭಿಪ್ರಾಯ ಅಥವಾ ಬಂಡಾಯವಿಲ್ಲ ಎಂದು ಆಯೋಗ ಸ್ಪಷ್ಟಪಡಿಸಿದೆ. ಎಸ್‌ಐಆರ್‌ಗೆ ಸಂಬಂಧಿಸಿದ ಪ್ರಮುಖ ನಿರ್ಧಾರಗಳನ್ನು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಸರ್ವಾನುಮತದಿಂದ ಅನುಮೋದಿಸಿದ್ದಾರೆ ಎಂದು ತಿಳಿಸಿದೆ. 2ನೇ ಪುಟಕ್ಕೆ...

■ ಸುದ್ದಿ ಚುಟುಕು

## ವರ್ಷಾಂತ್ಯಕ್ಕೆ ಜಿಬಿಎ ಚುನಾವಣೆ: ತೆರೆಮರೆಯಲ್ಲಿ ಸಿದ್ಧತೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಗೆ ಆಡಳಿತಾತ್ಮಕ ಸಿದ್ಧತೆಗಳು ಚುರುಕುಗೊಂಡಿವೆ. ಡಿಸೆಂಬರ್‌ನಲ್ಲಿ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಚುನಾವಣಾ ಕಾರ್ಯಕ್ಕೆ ಸಜ್ಜಾಗುತ್ತಿದ್ದಾರೆ.

ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಚುನಾವಣಾ ಸಿದ್ಧತೆಗೆ ಅಗತ್ಯ ಕ್ರಮ ಕೈಗೊಳ್ಳು ವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ ಎನ್ನಲಾಗಿದೆ. ಜಿಬಿಎ ಮುಖ್ಯ ಆಯುಕ್ತ ಹಾಗೂ ಐದು ಪಾಲಿಕೆಗಳ ಆಯುಕ್ತರ ಮಟ್ಟದಲ್ಲಿ ಮತದಾರರ ಪಟ್ಟಿ, ವಾರ್ಡ್ ವಾರು ಸಿದ್ಧತೆ ಸೇರಿದಂತೆ ಚುನಾವಣಾ ಸಂಬಂಧಿತ ಕಾರ್ಯಗಳಿಗೆ ಒತ್ತು ನೀಡಲಾಗುತ್ತಿದೆ.

ಜಿಬಿಎ ವ್ಯಾಪ್ತಿಯಲ್ಲಿ ಎಸ್‌ಐಆರ್ ಸಂಬಂಧಿತ ಕರಡು, ಅಂತಿಮ ಪಟ್ಟಿ, ಹಕ್ಕು–ಆಕ್ಷೇಪಣೆ ಹಾಗೂ ಇತರ ಮಾಹಿತಿಯನ್ನು ಅಧಿಕೃತ ಜಾಲತಾಣದಲ್ಲಿ ಒದಗಿಸಲಾಗಿದೆ. ಜಿಬಿಎ ಅಡಿ ರಚನೆಯಾಗಿರುವ ಐದು ನಗರ ಪಾಲಿಕೆಗಳ ಒಟ್ಟು 369 ವಾರ್ಡ್‌ಗಳಿಗೆ ಚುನಾವಣೆ ನಡೆಯಬೇಕಿದೆ. ನಿಖರ ಚುನಾವಣಾ ದಿನಾಂಕವನ್ನು ರಾಜ್ಯ ಚುನಾವಣಾ ಆಯೋಗ ಅಧಿಕೃತವಾಗಿ ಪ್ರಕಟಿಸಬೇಕಿದ್ದು, ಡಿಸೆಂಬರ್‌ನಲ್ಲಿ ಚುನಾವಣೆ ನಡೆಸಲು ಆಡಳಿತಾತ್ಮಕ ಸಿದ್ಧತೆಗಳು ಸಮಾನಾಂತರವಾಗಿ ನಡೆಯುತ್ತಿವೆ.

## SIR ನೋಟಿಸ್: ಮನೆಗೇ ತೆರಳಿ ದಾಖಲೆ ಸಂಗ್ರಹಿಸಲು BLOಗಳಿಗೆ ಸೂಚನೆ

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವೇಳೆ ನೋಟಿಸ್ ಪಡೆದ ಮತದಾರರಿಗೆ ಚುನಾವಣಾ ಆಯೋಗ ಸೌಲಭ್ಯ ಕಲ್ಪಿಸಿದ್ದು, ಅಗತ್ಯ ದಾಖಲೆಗಳನ್ನು ಸಂಗ್ರಹಿಸಲು ಬೂತ್ ಮಟ್ಟದ ಅಧಿಕಾರಿಗಳು ಅವರ ಮನೆಗಳಿಗೆ ತೆರಳುವಂತೆ ಸೂಚಿಸಿದೆ.

BLOಗಳು ಸಂಗ್ರಹಿಸಿದ ದಾಖಲೆಗಳನ್ನು ಇಅಖಓಜಣ ವೇದಿಕೆಯಲ್ಲಿ ಅಪ್‌ಲೋಡ್ ಮಾಡಲಿದ್ದಾರೆ. ನೋಟಿಸ್ ಪಡೆದವರನ್ನು ಸಾಮಾನ್ಯವಾಗಿ ಚುನಾವಣಾ ನೋಂದಣಿ ಅಧಿಕಾರಿ ಮುಂದೆ ವಿಚಾರಣೆಗೆ ಕರೆಯುವುದಿಲ್ಲ. ಅಗತ್ಯವಿರುವ ಅಪರೂಪದ ಸಂದರ್ಭಗಳಲ್ಲಿ ಮಾತ್ರ ವಿಚಾರಣೆ ನಡೆಸಲಾಗುವುದು. ಸಾಧ್ಯವಾದಷ್ಟು ವಿಚಾರಣೆಯನ್ನು ಆನ್‌ಲೈನ್ ಮೂಲಕ ನಡೆಸಲು ಆದ್ಯತೆ ನೀಡಲಾಗುತ್ತದೆ.

ವಿಚಾರಣೆ ಅಗತ್ಯವಾದಲ್ಲಿ ಮತದಾರರ ಪರವಾಗಿ ಕುಟುಂಬದ ಯಾವುದೇ ವಯಸ್ಕ ಸದಸ್ಯರು ಹಾಜರಾಗಲು ಅವಕಾಶವಿದೆ. SIR ವೇಳೆ ಪಟ್ಟಿಯಿಂದ ಹೆಸರು ಕೈಬಿಟ್ಟಿದ್ದರೆ, ಮರುಸೇರ್ಪಡೆಗಾಗಿ ಇಖಔಗೆ ಅರ್ಜಿ ಸಲ್ಲಿಸಬಹುದು. ರಾತ್ರಿ ಆಶ್ರಯ ತಾಣಗಳ ನಿವಾಸಿಗಳು, ಕಾರ್ಮಿಕರು, ಬಡವರು ಹಾಗೂ ನಿರಾಶ್ರಿತರಿಗಾಗಿ ವಿಶೇಷ ಶಿಬಿರಗಳನ್ನು ಆಯೋಜಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಆಯೋಗ ಸೂಚಿಸಿದೆ. ಅಗತ್ಯ ಸಂಖ್ಯೆಯಲ್ಲಿ ಸಹಾಯ ಕೇಂದ್ರಗಳನ್ನು ತೆರೆಯುವಂತೆಯೂ ನಿರ್ದೇಶಿಸಿದೆ.

## ಅನುದಾನ ಕೊರತೆ; ಪತ್ರ ಬರೆದು ಕೆಆರ್‌ಐಡಿಎಲ್ ಎಇಇ ನಾಪತ್ತೆ

● ವಿಕ್ರಮ ವಾಹಿನಿ । ಗದಗ

ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗದೆ ಆರ್ಥಿಕ ಒತ್ತಡ ಹಾಗೂ ಉಪಗುತ್ತಿಗೆದಾರರಿಂದ ಕಿರುಕುಳ ಎದುರಾಗಿದೆ ಎಂದು ಕೆಆರ್‌ಐಡಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿದ್ದ ಗದಗ ಉಪವಿಭಾಗದ ಎಇಇ ಫರ್ವಿಜ್ ಧಾರವಾಡ ನಾಪತ್ತೆಯಾಗಿದ್ದಾರೆ.

ಸೆ.12ರಂದು ಪತ್ರ ಬರೆದಿದ್ದ ಅವರು, ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಹಾಗೂ ಬೇರೆ ಎಇಇಯನ್ನು ನಿಯೋಜಿಸುವಂತೆ ಮನವಿ ಮಾಡಿದ್ದರು ಎನ್ನಲಾಗಿದೆ. ಸೆ.13ರಂದು ಬೆಂಗಳೂರಿನಲ್ಲಿ ಸಭೆಯಿದೆ ಎಂದು ಮನೆಯಿಂದ ತೆರಳಿದ್ದ ಫರ್ವಿಜ್, ಮರುದಿನದವರೆಗೆ ಕುಟುಂಬದವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದರು. ಬಳಿಕ ಮೊಬೈಲ್ ಸ್ವಿಚ್‌ಆಫ್ ಆಗಿದ್ದು, ಸಂಪರ್ಕಕ್ಕೆ ಸಿಕ್ಕಿಲ್ಲ.

ಸೆ.16ರಂದು ಕುಟುಂಬಸ್ಥರು ಬೆಟಗೇರಿ ಬಡಾವಣೆ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದು, ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ.

## ಮೃತ ಗ್ರಾಹಕನ ಖಾತೆಯಿಂದ ಹಣ ದುರುಪಯೋಗ: ಮ್ಯಾನೇಜರ್‌ಗೆ ಜೈಲು

● ವಿಕ್ರಮ ವಾಹಿನಿ । ಮೈಸೂರು

ಮೃತ ಗ್ರಾಹಕರ ಬ್ಯಾಂಕ್ ಖಾತೆಯಿಂದ ಲಕ್ಷಾಂತರ ರೂಪಾಯಿ ವರ್ಗಾವಣೆ ಮಾಡಿಕೊಂಡು, ಬ್ಯಾಂಕ್‌ನ ಆಂತರಿಕ ಖಾತೆಯ ಹಣವನ್ನೂ ದುರುಪಯೋಗ ಪಡಿಸಿಕೊಂಡ ಪ್ರಕರಣದಲ್ಲಿ ಎಸ್‌ಬಿಐ ಚಾಮುಂಡಿಪುರ ಶಾಖೆಯ ಮಾಜಿ ಚೀಫ್ ಮ್ಯಾನೇಜರ್ ಎ.ವಿ. ಕುಲಕರ್ಣಿಗೆ ಮೈಸೂರಿನ ಒಂದನೇ ಸಿಜೆಎಂ ನ್ಯಾಯಾಲಯ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ರೂ 50 ಸಾವಿರ ದಂಡ ವಿಧಿಸಿದೆ.

ಕುಲಕರ್ಣಿ ಅವರು 2009ರಿಂದ 2011ರ ಅವಧಿಯಲ್ಲಿ ಮೃತಪಟ್ಟಿದ್ದ ಗ್ರಾಹಕ ಕೃಷ್ಣ ಅಯ್ಯರ್ ಅವರ ಖಾತೆಯಿಂದ ರೂ 40.53 ಲಕ್ಷವನ್ನು ಹಂತ ಹಂತವಾಗಿ ತಮ್ಮ ಹಾಗೂ ಪುತ್ರನ ಖಾತೆಗೆ ವರ್ಗಾಯಿಸಿಕೊಂಡಿದ್ದರು. ಅಲ್ಲದೆ, ಬ್ಯಾಂಕ್‌ನ ಆಂತರಿಕ ಶಾಖೆಯ ಖಾತೆಯಿಂದ ರೂ 21.04 ಲಕ್ಷವನ್ನು ದುರುಪಯೋಗಪಡಿಸಿಕೊಂಡಿದ್ದರು.

ಪ್ರಕರಣ ಮೇಲಧಿಕಾರಿಗಳ ಗಮನಕ್ಕೆ ಬಂದ ಬಳಿಕ ತನಿಖೆ ನಡೆಸಿ ಕೆ.ಆರ್. ಠಾಣೆ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ವೇಳೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಲಯ ಶಿಕ್ಷೆ ವಿಧಿಸಿದೆ.

## ಪಾಕಿಸ್ತಾನದಲ್ಲಿ ಭೀಕರ ಆತ್ಮಾಹುತಿ ದಾಳಿ; 11 ಸಾವು

● ವಿಕ್ರಮ ವಾಹಿನಿ । ಇಸ್ಲಾಮಾಬಾದ್

ವಾಯುವ್ಯ ಪಾಕಿಸ್ತಾನದ ಖೈಬರ್ ಪಖ್ತುಂಕ್ವಾ ಪ್ರಾಂತ್ಯದ ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯಲ್ಲಿ ಶನಿವಾರ ಭೀಕರ ಆತ್ಮಾಹುತಿ ಬಾಂಬ್ ದಾಳಿ ನಡೆದಿದ್ದು, ಇಬ್ಬರು ಅಧಿಕಾರಿಗಳು ಸೇರಿದಂತೆ ಕನಿಷ್ಠ 11 ಮಂದಿ ಮೃತಪಟ್ಟಿದ್ದಾರೆ. 30ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.



ಪೊಲೀಸ್ ಚೆಕ್‌ಪೋಸ್ಟ್ ಬಳಿ ಸ್ಫೋಟಕ ತುಂಬಿದ ವಾಹನವನ್ನು ಆತ್ಮಾಹುತಿ ಬಾಂಬರ್ ಸ್ಫೋಟಿಸಿಕೊಂಡಿದ್ದಾನೆ. ಮೃತರಲ್ಲಿ ಅಬಕಾರಿ ಹಾಗೂ ಸುಂಕ (ಕಸ್ಟಮ್ಸ್) ಇಲಾಖೆಯ ಇಬ್ಬರು ಅಧಿಕಾರಿಗಳೂ ಸೇರಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ.

ಸ್ಥಳದಲ್ಲಿ ಬಾಂಬ್ ನಿಷ್ಕ್ರಿಯ ದಳ ಪರಿಶೀಲನೆ ನಡೆಸುತ್ತಿದ್ದು, ಸ್ಫೋಟದ ಸ್ವರೂಪ ಹಾಗೂ ದಾಳಿಯ ಸಂಪೂರ್ಣ ಹಿನ್ನೆಲೆಯ ಕುರಿತು ತನಿಖೆ ಮುಂದುವರಿದಿದೆ. ದಾಳಿಯ ಹೊಣೆಯನ್ನು ತೆಹ್ರೀಕ್–ಇ–ತಾಲಿಬಾನ್ ಪಾಕಿಸ್ತಾನ (ಟಿಟಿಪಿ) ಹೊತ್ತುಕೊಂಡಿದೆ ಎಂದು ಅಸೋಸಿಯೇಟೆಡ್ ಪ್ರೆಸ್ ವರದಿ ಮಾಡಿದೆ. ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಯಿದೆ.

## ಪರಶುರಾಮ ಪ್ರತಿಮೆ ಮರುಸ್ಥಾಪನೆ: ಸರ್ಕಾರಕ್ಕೆ ಹೈ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಉಮಿಕಲ್ ಬೆಟ್ಟದಲ್ಲಿರುವ ಪರಶುರಾಮ ಪ್ರತಿಮೆಯನ್ನು ಮರುಸ್ಥಾಪಿಸುವಂತೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚಿಸಿದೆ.

ವರಂಗ ಗ್ರಾಮದ ಉದಯ ಶೆಟ್ಟಿ ಮುನಿಯಾಲು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಅನು ಶಿವರಾಮ್ ಹಾಗೂ ಟಿ.ಪಿ. ವಿವೇಕಾನಂದ ಅವರಿದ್ದ ವಿಭಾಗೀಯ ಪೀಠ, 2025ರ ಜುಲೈ 24ರಂದು ಅರ್ಜಿದಾರರು ಪ್ರವಾಸೋದ್ಯಮ ಇಲಾಖೆಗೆ ಸಲ್ಲಿಸಿರುವ ಮನವಿಯನ್ನು ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ನಿರ್ದೇಶಿಸಿತು.

ಮನವಿ ಪರಿಗಣಿಸುವ ವೇಳೆ ಉಡುಪಿ ನಿರ್ಮಿತಿ ಕೇಂದ್ರಕ್ಕೆ ನೋಟಿಸ್ ನೀಡಿ, ಅದರ ವಾದವನ್ನೂ ಆಲಿಸುವಂತೆ ಪೀಠ ಸೂಚಿಸಿ ಅರ್ಜಿಯನ್ನು ಇತ್ಯರ್ಥಪಡಿಸಿತು.

ಸಾರ್ವಜನಿಕರ ತೆರಿಗೆ ಹಣದಿಂದ ನಿರ್ಮಿಸಲಾಗಿದ್ದ 33 ಅಡಿ ಎತ್ತರದ ಪ್ರತಿಮೆಯನ್ನು 2023ರ ಜನವರಿ 27ರಂದು ಉದ್ಘಾಟಿಸಲಾಗಿತ್ತು. ಪ್ರತಿಮೆಯ ನಿರ್ಮಾಣದಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಹಾಗೂ ಸಾರ್ವಜನಿಕ ಸುರಕ್ಷತೆಯ ದೃಷ್ಟಿಯಿಂದ ಅದನ್ನು ತೆರವುಗೊಳಿಸಲಾಗಿತ್ತು. ಪ್ರತಿಮೆಯನ್ನು ಮರುನಿರ್ಮಿಸಿ ಪ್ರತಿಷ್ಠಾಪಿಸುವಂತೆ ಅರ್ಜಿದಾರರು ಹೈಕೋರ್ಟ್ ಮೊರೆ ಹೋಗಿದ್ದರು.

## ಪವಿತ್ರಾ ಗೌಡಗೆ ಜಾಮೀನು ನಿರಾಕರಣೆ

● ವಿಕ್ರಮ ವಾಹಿನಿ । ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟಿ ಪವಿತ್ರಾ ಗೌಡ ಅವರ ಜಾಮೀನು ಅರ್ಜಿಯನ್ನು ನಗರದ 59ನೇ ಸಿಸಿಎಚ್ ನ್ಯಾಯಾಲಯ ಶನಿವಾರ ವಜಾಗೊಳಿಸಿದೆ.

ಪ್ರಕರಣದ ಪ್ರಮುಖ ಸಾಕ್ಷಿಗಳ ವಿಚಾರಣೆ ಬಹುತೇಕ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಜಾಮೀನು ನೀಡುವಂತೆ ಪವಿತ್ರಾ ಗೌಡ ಪರ ವಕೀಲರಾದ ಬಾಲನ್ ಹಾಗೂ ನಾರಾಯಣಸ್ವಾಮಿ ವಾದಿಸಿದ್ದರು. ಪವಿತ್ರಾ ಗೌಡ ಸಿಂಗಲ್ ಮದರ್ ಆಗಿದ್ದು, ಪುತ್ರಿಯ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯವನ್ನು ಪರಿಗಣಿಸಿ ಮಾನವೀಯ ನೆಲೆಯಲ್ಲಿ ಜಾಮೀನು ನೀಡುವಂತೆ ಮನವಿ ಮಾಡಲಾಗಿತ್ತು.

ವಾದ ಆಲಿಸಿದ 59ನೇ ಸಿಸಿಎಚ್ ನ್ಯಾಯಾಧೀಶೆ ಸುಜಾತ ಎಂ. ಸಂಬ್ರಾಣಿ ಅವರು ಜಾಮೀನು ಅರ್ಜಿಯನ್ನು ತಿರಸ್ಕರಿಸಿ ಆದೇಶ ಹೊರಡಿಸಿದ್ದಾರೆ.

# ವಿ ಶಿ ಷ್ಟ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

### ಸವಿ ವಾಹಿನಿ

ಕೆಲವೊಮ್ಮೆ ಜ್ಞಾನ ಎನ್ನುವುದು ಒಂದು ಶಾಪವಿದ್ದಂತೆ, ಏಕೆಂದರೆ ಕನಿಷ್ಟ ಪಕ್ಕ ಸಾಮಾನ್ಯ ಜ್ಞಾನವೂ ಇಲ್ಲದ ಜನರೊಂದಿಗೆ ನೀವು ವ್ಯವಹರಿಸಬೇಕಾಗಿ ಬರುತ್ತದೆ...

### ದಿನ ಪಂಚಾಂಗ

ಸೆಪ್ಟಂಬರ್, 27-2026, ಭಾನುವಾರ ವರ್ಷ ಋತು,
ಭಾದ್ರಪದ ಮಾಸ, ಬಹುಳ ಪಕ್ಷ
ಪಾಡ್ಯ ತಿಥಿ ರಾ.9:17
ಉತ್ತರಾಭಾದ್ರ ನಕ್ಷತ್ರ ಮ.12:15
ರಾಹುಕಾಲ ಸಾ 4:41-6:12
ವಿಶ್ವ ಪ್ರವಾಸೋದ್ಯಮ ದಿನ, ಪ್ರವಚನ ಪಿತಾಮಹ ಲಿಂಗಾನಂದ ಮಹಾಸ್ವಾಮಿ ಜಯಂತಿ

### ಆಧ್ಯಾತ್ಮ

## 'ಮಿಶ್ರ ತಳಿಯ ಹಾಲು ಅಹಿತ ಎಂದು ವಿಜ್ಞಾನವೂ ಒಪ್ಪಿದೆ'



● ವಿಕ್ರಮ ವಾಹಿನಿ । ಗೋಕರ್ಣ

ಮಿಶ್ರ ತಳಿ ಹಸುವಿನ ಹಾಲು ಅಹಿತ ಎಂಬುದಾಗಿ ಇಂದಿನ ವಿಜ್ಞಾನವೂ ಒಪ್ಪಿದೆ. ಆದರೆ ದುಡ್ಡಿನ ಹಿಂದೆ ಜಗತ್ತು ಓಡುತ್ತಿರುವುದರಿಂದ ಅದನ್ನು ಒಪ್ಪಿಕೊಳ್ಳದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 26.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಆಧುನಿಕ ವಿಜ್ಞಾನವೂ ಕೂಡ

ದೇಶಿ ಗೋವು ಹಾಗೂ ಮಿಶ್ರತಳಿಯ ಹಾಲು, ತುಪ್ಪಗಳನ್ನು ವಿಶ್ಲೇಷಿಸಿದ್ದು, ದೇಶಿ ಗೋವಿನ ಎ2 ಹಾಲು ಮತ್ತು ತುಪ್ಪಗಳು ಶ್ರೇಷ್ಠ ಎಂಬುದಾಗಿ ದೃಢೀಕರಿಸಿವೆ. ಗೋವಿನ ಉತ್ಪನ್ನಗಳು ಜೀರ್ಣಕ್ರಿಯೆಗೆ ಪೂರಕವಾದರೆ, ಮಿಶ್ರತಳಿಯ ಉತ್ಪನ್ನಗಳು ಜೀರ್ಣಕ್ರಿಯೆಗೆ ಸಹಕಾರಿಯಲ್ಲ. ಆಧುನಿಕ ವಿಜ್ಞಾನ ಅದರ ಭಾಷೆಯಲ್ಲಿ ಹೇಳಿದರೆ, ಆಯುರ್ವೇದ ಅಗ್ನಿದೀಪಕ, ಲಘು, ಪಾಚನ ಇತ್ಯಾದಿಯಾಗಿ ಅದರ ಭಾಷೆಯಲ್ಲಿ ಹೇಳಿದೆ. ದೇಶಿ ಗೋವು ಹಾಗೂ ಮಿಶ್ರ ತಳಿಯ ಹಸುವಿನ ವಿಷಯದಲ್ಲಿ ಇವೆರಡೂ ಒಂದನ್ನೇ ಹೇಳುತ್ತಿವೆ ಎಂದರು.

ಇಂದು ಎಷ್ಟೋ ಆಯುರ್ವೇದ ಔಷಧಗಳಲ್ಲಿ ಮಿಶ್ರ ತಳಿ ಹಸುವಿನ ತುಪ್ಪವನ್ನು ಬಳಸುತ್ತಿರುವುದರಿಂದ, ಅದು ಪರಿಣಾಮಕಾರಿಯಲ್ಲ ಎಂಬ ಮಾತು ಆಗಾಗ ಕೇಳಿಬರುತ್ತದೆ. ಔಷಧ ತಯಾರಿಕೆಯಲ್ಲಿ ಯೋಗವಾಹಕವಾದ ದೇಶೀ ತುಪ್ಪವನ್ನು ಬಳಸದಿರುವುದೇ ಇದಕ್ಕೆ ಕಾರಣ. ಬದುಕನ್ನು ಬಂಗಾರವಾಗಿಸಲು, ಜೀವವನ್ನು ದೇವರನ್ನಾಗಿ ಮಾಡಲು ತುಪ್ಪ ಸಾಕು. ಇದು ದೇಶಿ ತುಪ್ಪದ ಸಾಮರ್ಥ್ಯ ಎಂದು ವಿವರಿಸಿದರು.

ಗಡ್ಡ ಬಿಟ್ಟು, ವೇಷವನ್ನು ಧರಿಸುವುದರಿಂದ ಋಷಿಯಾಗುವುದಿಲ್ಲ. ಬೇರೆಯವರ ಕಣ್ಣಿಗೆ ಕಾಣದ್ದು ಯಾರ ಕಣ್ಣಿಗೆ ಕಾಣುತ್ತದೆಯೋ ಅವನು ನಿಜವಾದ ಋಷಿ. ಇಂದಿನ ವಿಜ್ಞಾನಿಗಳು ಕೇವಲ ಭೌತಿಕ ಗುಣಗಳನ್ನು ವಿಶ್ಲೇಷಿಸುತ್ತಿದ್ದಾರೆ. ಆದರೆ ಋಷಿಗಳು ಜ್ಞಾನ ದೃಷ್ಟಿಯಿಂದ ಅಪೂರ್ವ ಜ್ಞಾನವನ್ನು ಕಂಡುಕೊಂಡಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಡಾ. ವಿಶ್ವನಾಥ್ ಭಟ್ ಹಾಗೂ ಡಾ.ವಿದ್ಯಾ ಭಟ್ ದಂಪತಿಗಳು ಗುರುಭಿಕ್ಷಾಸೇವೆ ಸಮರ್ಪಿಸಿದರು. ಉದ್ಯಮಿ ಕೆ. ಎಸ್ ಭಟ್ ಮುಂಬಯಿ, ವೆಂಕಟ ರಮಣ ಹೆಗಡೆ ಕವಲಕ್ಕಿ, ಗಣೇಶ್ ಆರ್ಕೊಡ್ಲು, ಪ್ರಧಾನ ಸಂಯೋಜಕ ಚಂದನ್ ಶಾಸ್ತ್ರಿ, ಶ್ರೀವತ್ಸ ಭೀಮನಕೊಣೆ, ವಿಷ್ಣು ಭಟ್ ಕವಲಕ್ಕಿ, ಶ್ರೀಕೃಷ್ಣ ಶಾಸ್ತ್ರಿ, ಸೌಮ್ಯ ಮಧ್ಯಸ್ಥ, ಅಜಿತ್ ಹೆಗಡೆ ಗುಡ್ಗೆ, ದಿನಪ್ರಧಾನರಾಗಿ ಸೂರ್ಯನಾರಾಯಣ ದಂಪತಿಗಳು ಉಪಸ್ಥಿತರಿದ್ದರು.

ಸಂಪನ್ನವಾದ ಸೀಮೋಲ್ಲಂಘನ : ಕಳೆದ ಎರಡು ತಿಂಗಳಿನಿಂದ ಚಾತುರ್ಮಾಸ್ಯ ವ್ರತವನ್ನು ಕೈಗೊಂಡಿದ್ದ ಶ್ರೀಗಳು, ಸೀಮೋಲ್ಲಂಘನವನ್ನು ಮಾಡುವ ಮೂಲಕ ಚಾತುರ್ಮಾಸ್ಯ ವ್ರತವನ್ನು ಸಂಪನ್ನಗೊಳಿಸಿದರು. ಗಂಗಾವಳಿ ನದಿಗೆ ಫಲ ಸಮರ್ಪಿಸಿ, ತೊರ್ಕೆಯ

ಕೆಂಗಾಳ ಪರಮೇಶ್ವರಿ ದೇವಾಲಯಕ್ಕೆ ಭೇಟಿ ನೀಡಿ, ಭಕ್ತರನ್ನು ಆಶೀರ್ವಾದಿಸಿದರು. ಪ್ರದೀಪ್ ನಾಯ್ಕ್ ದೇವರಬಾವಿ, ಮಹೇಶ್ ಶೆಟ್ಟಿ, ವೆಂಕಟರಮಣ ಕೌರಿ, ದೇವಾಲಯದ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

**ಸರ್ವ ಸಮಾಜದ ಪಾಲ್ಗೊಳ್ಳುವಿಕೆ:** ಶ್ರೀರಾಮಚಂದ್ರಾಪುರ ಮಠಕ್ಕೆ ಪಾರಂಪರಿಕವಾಗಿ ನಡೆದುಕೊಳ್ಳುವ ಭಕ್ತ ಸಮಾಜದವರೆಲ್ಲರೂ ಚಾತುರ್ಮಾಸ್ಯದಲ್ಲಿ ಪಾಲ್ಗೊಂಡು ತಮ್ಮ ಭಕ್ತಿಯನ್ನು ಸಮರ್ಪಿಸಿದರು. 23 ವಿವಿಧ ಸಮಾಜಗಳು ಸ್ವರ್ಣಪಾದುಕಾ ಪೂಜೆಯನ್ನು ಸಮರ್ಪಿಸಿ, ತಮ್ಮ ಪರಂಪರಾಗತ ಗುರು ಭಕ್ತಿಯನ್ನು ವ್ಯಕ್ತಪಡಿಸಿದರು. ಚಾತುರ್ಮಾಸ್ಯದ ಅವಧಿಯಲ್ಲಿ ಆಹಾರ ಪದ್ಧತಿ, ದೇಶಿ ಗೋವು ಹಾಗೂ ಪಾರಂಪರಿಕ ಆಹಾರದ ಮಹತ್ವದ ಕುರಿತು ಶ್ರೀಗಳು ಸುದೀರ್ಘವಾಗಿ ಮಾರ್ಗದರ್ಶನ ನೀಡಿದರು. 60 ದಿನಗಳ ಕಾಲ ನಡೆದ ಪ್ರವಚನಗಳಲ್ಲಿ ಕರಾವಳಿ ಹಾಗೂ ಮಲೆನಾಡಿನ ಪಾರಂಪರಿಕ ಆಹಾರ ಪದ್ಧತಿಗಳ ಮಹತ್ವವನ್ನೂ ವಿವರಿಸಿದರು.

**ಆಹಾರದ ಕುರಿತಾದ ಪ್ರವಚನ:** ಪಾರಂಪರಿಕ ಭೋಜನ: ಆಹಾರದ ಕುರಿತಾಗಿ ಪೀಠಾಧಿಪತಿಗಳೊಬ್ಬರು ಸವಿಸ್ತಾರವಾಗಿ ಸಮಾಜಕ್ಕೆ ಪ್ರವಚನದ ಮೂಲಕ ಮಾರ್ಗದರ್ಶನ ಮಾಡಿದ್ದು ಇದೇ ಮೊದಲಾಗಿದ್ದು, ಇಂದಿನ ಕಾಲಕ್ಕೆ ಅತ್ಯಗತ್ಯವಾದ ವಿಚಾರವನ್ನು ಶ್ರೀಗಳು ಚಾತುರ್ಮಾಸ್ಯದ 60 ದಿನಗಳ ಕಾಲ ಪ್ರವಚನದ ಮೂಲಕ ಆಹಾರದ ಸರಿ ತಪ್ಪುಗಳನ್ನು ತಿಳಿಸಿದರು. ಹಾಗೆಯೇ 60 ದಿನಗಳು ಕರಾವಳಿ, ಮಲೆನಾಡು ಭಾಗದ ಪಾರಂಪರಿಕ ಆಹಾರ ಪದಾರ್ಥಗಳು ಚಾತುರ್ಮಾಸ್ಯದ ವಿಶೇಷವಾಗಿತ್ತು.

## ಸಿಇಸಿ ಒಗ್ಗಟ್ಟಿನ ಮಂತ್ರ: ವಿಪಕ್ಷಗಳಿಂದ ಪ್ರತಿಭಟನೆಗಳ ತಿರುಮಂತ್ರ

1ನೇ ಪುಟದಿಂದ

**ಮೋದಿಯವರ ವಿರುದ್ಧ ಸಿಡಿದೆದ್ದಿರುವುದಕ್ಕೆ ನಿದರ್ಶನ:** "ಪ್ರಧಾನಿ ಮೋದಿ ಅವರು ಕೈಗೊಂಬೆಯಂತಿರುವವರನ್ನು ಚುನಾವಣಾ ಆಯೋಗಕ್ಕೆ ನೇಮಕ ಮಾಡಿದರು. ಆದರೆ ಅವರು ತಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಕೆಲಸ ಮಾಡಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ತೀರ್ಪಿನ ವಿರುದ್ಧ ಸಿಡಿದೆದ್ದಿದ್ದಾರೆ. ಇದು ನಿಮ್ಮ ತೀರ್ಪಿನ ವಿರುದ್ಧ ಸಿಡಿದೆದ್ದಿರುವುದಕ್ಕೆ ನಿದರ್ಶನ" ಎಂದು ಕುಹಕವಾಡಿದರು.

"ಕರ್ನಾಟಕದ ಜನಸಂಖ್ಯೆ 7 ಕೋಟಿ. ಇದರಲ್ಲಿ 5.54 ಕೋಟಿ ಮತದಾರರು ಇದ್ದಾರೆ. ಇದನ್ನು ಎಸ್ ಐಆರ್ ನಡೆಸಿ 4.46 ಕೋಟಿಗೆ ಇಳಿಕೆ ಮಾಡಲಾಗಿದೆ. 30-40 ಲಕ್ಷಕ್ಕೆ ನೋಟಿಸ್ ನೀಡಲಾಗಿದೆ. ಇದರ ತೀರ್ಮಾನವನ್ನು ನಾವು ಕಾಯುತ್ತೇವೆ. ಮತದಾನದ ಹಕ್ಕು ಪ್ರತಿಯೊಬ್ಬ ವ್ಯಕ್ತಿಯ ಹಕ್ಕು. ಪ್ರಜಾಪ್ರಭುತ್ವ ವ್ಯವಸ್ಥೆ ಮೂಲಕ ನಮ್ಮ ಸಂವಿಧಾನ ನೀಡಿದ ಅತಿದೊಡ್ಡ ಅವಕಾಶ ಮತದಾನ. ಇದು ಕಳೆದು ಹೋಗಲು ನಾವು ಬಿಡೆವು" ಎಂದರು.

"ಬೆಂಗಳೂರು ಕೇಂದ್ರ ಲೋಕಸಭಾ ಸ್ಥಾನದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಖಾನ್ ಅವರು 31 ಸಾವಿರ ಮತಗಳ ಅಂತರದಿಂದ ಚುನಾವಣ ಆಯೋಗದ ಪ್ರಕಾರ ಸೋತಿದ್ದರು. ಈಗ ಎಸ್ ಐಆರ್ ನಿಂದ 12 ಲಕ್ಷ ಮತಗಳು ಕಡಿಮೆಯಾಗಿವೆ. ಇದಕ್ಕೆ ಬಿಜೆಪಿ ನಾಯಕರು ಉತ್ತರಿಸಲಿದ್ದಾರೆಯೇ?" ಎಂದರು.

"ಮಹದೇವಪುರದಲ್ಲಿ 3 ಲಕ್ಷ ಮತಗಳು ಕಾಣೆಯಾಗಿವೆ. ಈಗ 12 ಲಕ್ಷ ಮತಗಳನ್ನು ದುರುಪಯೋಗ ಮಾಡಿಕೊಳ್ಳಲಾಗಿದೆ. ಬಿಜೆಪಿಯ ದುಷ್ಕೃತ್ಯದಿಂದ ಪ್ರಜಾಪ್ರಭುತ್ವ ವ್ಯವಸ್ಥೆ ಮೇಲೆ ನಂಬಿಕೆ ಹೋಗುತ್ತಿದೆ. ಆದ ಕಾರಣ ಕಾಂಗ್ರೆಸ್ ಪಕ್ಷ ಹೋರಾಟ ಮಾಡುತ್ತಿದೆ. ಎಸ್ ಐಆರ್ ಸೇರಿದಂತೆ ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಎಂದು ನಾವು ಆಗ್ರಹಿಸುತ್ತಿದ್ದೇವೆ" ಎಂದರು.

**ಗ್ರಾಮ ಮಟ್ಟಕ್ಕೆ ಎಸ್ ಐಆರ್ ವಿರೋಧಿ ಹೋರಾಟ:** "ನಾವು ಇದೇ ಮುಂಬರುವ ನವೆಂಬರ್, ಡಿಸೆಂಬರ್ ವೇಳೆಗೆ ಸ್ಥಳೀಯ ಸಂಸ್ಥೆ ಚುನಾವಣೆ ನಡೆಸುತ್ತೇವೆ. ಇದಕ್ಕೆ ಬ್ಯಾಲೆಟ್ ಪೇಪರ್ ಬಳಸುವ ತೀರ್ಮಾನ ಮಾಡಿದ್ದೇವೆ. ಬಲಿಷ್ಠ ಚುನಾವಣಾ ವ್ಯವಸ್ಥೆಗೆ ನಾವು ಹೋರಾಟ ಮಾಡುತ್ತಿದ್ದೇವೆ. ಪ್ರತಿ ಹಳ್ಳಿಗೂ ಎಸ್ ಐಆರ್ ವಿರೋಧಿ ಹೋರಾಟ ತಲುಪಿಸಲಾಗುವುದು" ಎಂದರು.

"ಕಾಂಗ್ರೆಸ್ ಪಕ್ಷ ಸಂವಿಧಾನದ ಮೂಲಕ ದೇಶದ ಪ್ರಜೆಗಳಿಗೆ ಅತಿದೊಡ್ಡ ಅವಕಾಶ ನೀಡಿದೆ. ರಾಷ್ಟ್ರಧ್ವಜ, ರಾಷ್ಟ್ರಗೀತೆ ಸೇರಿದಂತೆ ಅನೇಕ ಕೊಡುಗೆಗಳನ್ನು ನಾವು ಈ ದೇಶಕ್ಕೆ ನೀಡಿದ್ದೇವೆ.

ಇಡೀ ಪ್ರಪಂಚ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ನೋಡಿ ಅನುಕರಿಸಿದೆ. ಆದರೆ ಬಿಜೆಪಿ ಆಡಳಿತಕ್ಕೆ ಬಂದ ದಿನದಿಂದ ನಮ್ಮ ಇಡೀ ಮಾದರಿ ವ್ಯವಸ್ಥೆ ಮೇಲೆ ಅನೇಕ ರಾಷ್ಟ್ರಗಳು ನಂಬಿಕೆ ಕಳೆದುಕೊಳ್ಳುವ ಸ್ಥಿತಿಗೆ ನಾವು ಬಂದಿದ್ದೇವೆ" ಎಂದರು.

"ಮತಗಳ್ಳತನದ ವಿರುದ್ಧ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರು ಇದೇ ನೆಲದಿಂದ ಹೋರಾಟ ಪ್ರಾರಂಭ ಮಾಡಿದ್ದರು. ಪ್ರತಿಯೊಬ್ಬ ಬಿಎಲ್ ಎ- 2 ಸೇರಿದಂತೆ ಪಕ್ಷದ ನಾಯಕರು ಹೋರಾಟ ರೂಪಿಸಬೇಕು" ಎಂದು ಹೇಳಿದರು.

## 30ರಂದು ಇಂಡಿಯಾ ಒಕ್ಕೂಟ ಸಭೆ

1ನೇ ಪುಟದಿಂದ

ಚುನಾವಣಾ ಆಯೋಗದ ಇಬ್ಬರು ಆಯುಕ್ತರು ಕಳೆದ 10 ತಿಂಗಳಲ್ಲಿ ಎಸ್ಐಆರ್ ಸೇರಿದಂತೆ ವಿವಿಧ ಕ್ರಮಗಳ ಕುರಿತು 14 ಬಾರಿ ಆಕ್ಷೇಪ ವ್ಯಕ್ತಪಡಿಸಿದ್ದರು ಎಂಬ ವರದಿ ವಿವಾದಕ್ಕೆ ಕಾರಣವಾಗಿದೆ. ಆದರೆ, ಆಯೋಗವು ಅಂತಿಮ ನಿರ್ಧಾರಗಳು ಸರ್ವಾನುಮತದಿಂದಲೇ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದೆ. ವೈಯಕ್ತಿಕ ಅಭಿಪ್ರಾಯಗಳು ಆಯೋಗದ ಅಂತಿಮ ನಿರ್ಧಾರವನ್ನು ಪ್ರತಿನಿಧಿಸುವುದಿಲ್ಲ ಎಂದು ಹೇಳಿದೆ.

ಈ ನಡುವೆ, ಸೆ.30ರ ಸಭೆಯಲ್ಲಿ ಸಿಇಸಿ ವಿರುದ್ಧದ ಮುಂದಿನ ಕ್ರಮ ಹಾಗೂ ಸಂಸತ್ತಿನಲ್ಲಿ ಮಂಡಿಸಲು ಉದ್ದೇಶಿಸಿರುವ ಪದಚ್ಯುತಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ವಿಪಕ್ಷಗಳ ನಡುವೆ ಸಮನ್ವಯ ಸಾಧಿಸುವ ಸಾಧ್ಯತೆಯಿದೆ.

**ವಿಪಕ್ಷಗಳ ಸಮನ್ವಯಕ್ಕೆ ಒತ್ತು:** ಸೆ.30ರ ಸಭೆಯಲ್ಲಿ ಕಾಂಗ್ರೆಸ್ ಸೇರಿದಂತೆ ಮಿತ್ರಪಕ್ಷಗಳು ಎಸ್ಐಆರ್ ಕುರಿತು ತಮ್ಮ ನಿಲುವುಗಳನ್ನು ಮಂಡಿಸುವ ಸಾಧ್ಯತೆಯಿದೆ. ಸಂಸತ್ತಿನಲ್ಲಿ ಮುಂದಿನ ಹಂತದ ಹೋರಾಟ ಹಾಗೂ ವಿವಿಧ ಪಕ್ಷಗಳ ನಡುವೆ ಸಮನ್ವಯ ಸಾಧಿಸುವ ಕುರಿತು ಚರ್ಚೆ ನಡೆಯಲಿದೆ.

**ಪದಚ್ಯುತಿ ಪ್ರಸ್ತಾವನೆ ಚರ್ಚೆ:** ಸಿಇಸಿ ವಿರುದ್ಧ ಸಂಸತ್ತಿನಲ್ಲಿ ಪದಚ್ಯುತಿ ಪ್ರಸ್ತಾವನೆ ಮಂಡಿಸುವ ಸಾಧ್ಯತೆಯನ್ನೂ ವಿಪಕ್ಷಗಳು ಪರಿಶೀಲಿಸುತ್ತಿವೆ. ಈ ಕುರಿತು ಇಂಡಿಯಾ ಒಕ್ಕೂಟ ಒಮ್ಮತದ ನಿಲುವು ರೂಪಿಸುವ ನಿರೀಕ್ಷೆಯಿದೆ.

ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ: ಸೆ.29ರಂದು ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚುನಾವಣಾ ಆಯೋಗದ ವಿಚಾರ, ಎಸ್ಐಆರ್ ಹಾಗೂ ಮುಂದಿನ ಹೋರಾಟದ ರೂಪುರೇಷೆಗಳ ಕುರಿತು ಚರ್ಚೆ ನಡೆಯಲಿದೆ.

ಬಳಿಕ ಇಂಡಿಯಾ ಒಕ್ಕೂಟದ ಸಭೆಯಲ್ಲಿ ಈ ನಿಲುವುಗಳನ್ನು ಮಿತ್ರಪಕ್ಷಗಳೊಂದಿಗೆ ಹಂಚಿಕೊಳ್ಳುವ ಸಾಧ್ಯತೆಯಿದೆ.

**ಆಯೋಗದ ಸ್ಪಷ್ಟನೆ:** ಈ ನಡುವೆ ಚುನಾವಣಾ ಆಯೋಗವು ಎಸ್ಐಆರ್ ಸೇರಿದಂತೆ ತನ್ನ ಎಲ್ಲ ಅಂತಿಮ ನಿರ್ಧಾರಗಳನ್ನು ಮೂವರು ಆಯುಕ್ತರ ಸರ್ವಾನುಮತದ ಅನುಮೋದನೆಯೊಂದಿಗೆ ಕೈಗೊಳ್ಳಲಾಗಿದೆ ಎಂದು ಪುನರುಚ್ಚರಿಸಿದೆ. ಆಯುಕ್ತರು ಆಂತರಿಕ ಚರ್ಚೆಯಲ್ಲಿ ಭಿನ್ನ ಅಭಿಪ್ರಾಯ, ಸಲಹೆ ಅಥವಾ ಆಕ್ಷೇಪ ವ್ಯಕ್ತಪಡಿಸುವುದು ಸಾಮಾನ್ಯ ಪ್ರಕ್ರಿಯೆ ಎಂದು ಆಯೋಗ ತಿಳಿಸಿದೆ.

**ವಿವಾದ ಮುಂದುವರಿಕೆ:** ಆಯೋಗದ ಸ್ಪಷ್ಟನೆಯ ನಡುವೆಯೂ ಆಂತರಿಕ ಆಕ್ಷೇಪಗಳ ವರದಿ ಹಾಗೂ ಎಸ್ಐಆರ್ ಪ್ರಕ್ರಿಯೆ ಕುರಿತು ವಿಪಕ್ಷಗಳ ಟೀಕೆ ಮುಂದುವರಿದಿದೆ. ಹೀಗಾಗಿ ಸೆ.30ರ ಸಭೆಯ ಬಳಿಕ ಇಂಡಿಯಾ ಒಕ್ಕೂಟದ ಮುಂದಿನ ರಾಜಕೀಯ ಹಾಗೂ ಸಂಸತ್ತಿನ ಕಾರ್ಯತಂತ್ರದ ಬಗ್ಗೆ ಸ್ಪಷ್ಟತೆ ಸಿಗುವ ನಿರೀಕ್ಷೆಯಿದೆ.

## ಎಸ್ಐಆರ್ ನಿರ್ಧಾರದಲ್ಲಿ ಭಿನ್ನಾಭಿಪ್ರಾಯವಿಲ್ಲ: ಚುನಾವಣಾ ಆಯೋಗ

1ನೇ ಪುಟದಿಂದ


ಎಸ್ಐಆರ್‌ನಲ್ಲಿ ನೋಟಿಸ್ ಪಡೆದ ಮತದಾರರು ಪ್ರತಿಯೊಂದು ಪ್ರಕರಣದಲ್ಲೂ ಚುನಾವಣಾ ನೋಂದಣಿ ಅಧಿಕಾರಿ (ಇಆರ್‌ಒ) ಮುಂದೆ ಖುದ್ದಾಗಿ ಹಾಜರಾಗಬೇಕಿಲ್ಲ. ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಗೆ ತೆರಳಿ ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ಇಸಿಐನೆಟ್‌ನಲ್ಲಿ ಅಪ್‌ಲೋಡ್ ಮಾಡಲಿದ್ದಾರೆ. ಅಗತ್ಯವಿರುವ ಅಪರೂಪದ ಪ್ರಕರಣಗಳಲ್ಲಿ ಮಾತ್ರ ವಿಚಾರಣೆ ನಡೆಸಲಾಗುವುದು ಎಂದು ಆಯೋಗ ತಿಳಿಸಿದೆ.

ದೆಹಲಿ ಎಸ್ಐಆರ್‌ನಲ್ಲಿ ಹಕ್ಕು-ಆಕ್ಷೇಪಣೆ ಸಲ್ಲಿಕೆ ಗಡುವನ್ನು ಅ.30ರವರೆಗೆ ವಿಸ್ತರಿಸಲಾಗಿದ್ದು, ವಿಲೇವಾರಿ ಅವಧಿಯನ್ನು ನ.30ರವರೆಗೆ ವಿಸ್ತರಿಸಲಾಗಿದೆ. ಇಸಿಐನೆಟ್ ವ್ಯವಸ್ಥೆಯ ಕಾರ್ಯನಿರ್ವಹಣೆ ಹಾಗೂ ಕಾನೂನು-ನಿಯಮಗಳ ಅನುಸರಣೆಯನ್ನು ಪರಿಶೀಲಿಸಲು ಹಿರಿಯ ಉಪ ಚುನಾವಣಾ ಆಯುಕ್ತರ ನೇತೃತ್ವದಲ್ಲಿ ಸಮಿತಿ ರಚಿಸಲು ನಿರ್ಧರಿಸಲಾಗಿದೆ.

## "ಶಾಸಕರ ಮನೆ ಬೆಂಕಿ ಆರಿಸುವ ಕೆಲಸವೂ ಸಿಎಂ ಮಾಡಲಿ"

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನಲ್ಲಿ ಮನೆ ಮಾಡಿಕೊಂಡಿರುವ ಶಾಸಕರು ಎರಡೆರಡು ಮದುವೆಯಾಗಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿರುವುದರಿಂದ ಶಾಸಕರ ಕುಟುಂಬಗಳಲ್ಲಿ ಗೊಂದಲ ಉಂಟಾಗಿದೆ. ಹೀಗಾಗಿ ಶಾಸಕರ ಮನೆಗೆ ಹಚ್ಚಿರುವ ಬೆಂಕಿಯನ್ನು ಆರಿಸುವ ಕೆಲಸವನ್ನೂ ಮುಖ್ಯಮಂತ್ರಿಗಳೇ ಮಾಡಬೇಕು ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದರು.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಹೇಳಿಕೆಯಿಂದ ಶಾಸಕರನ್ನು ಅವರ ಸ್ವಕ್ಷೇತ್ರಗಳಲ್ಲಿ ಜನರು ಅನುಮಾನದಿಂದ ನೋಡುವಂತಾಗಿದೆ. ಶಾಸಕರು ನೆಮ್ಮದಿ ಕಳೆದುಕೊಂಡಿದ್ದಾರೆ. ಎರಡು ಮದುವೆ ಮಾಡಿಕೊಂಡಿರುವ ಶಾಸಕರ ಪಟ್ಟಿಯನ್ನು ಮುಖ್ಯಮಂತ್ರಿ ಬಿಡುಗಡೆ ಮಾಡಿದರೆ ಸತ್ಯಾಸತ್ಯತೆ ತಿಳಿಯಲಿದ್ದು, ಅನುಮಾನಕ್ಕೂ ತೆರೆ ಬೀಳಲಿದೆ ಎಂದರು.

**ನಾಯಕರಿಗೆ ಹೆಚ್ಚಿನ ಭದ್ರತೆ ನೀಡಲಿ:** ಮಾಜಿ ಸಂಸದ ಪ್ರತಾಪ್ ಸಿಂಹ, ಶಾಸಕ ಸಿ.ಟಿ. ರವಿ, ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಹಲವು ನಾಯಕರ ಹತ್ಯೆಗೆ ಸಂಚು ರೂಪಿಸಿದ ಆರೋಪದ ಮೇಲೆ ಚಿಕ್ಕಬಳ್ಳಾಪುರದಲ್ಲಿ ಉಗ್ರರನ್ನು ಬಂಧಿಸಿರುವುದು ಸೂಕ್ಷ್ಮ ವಿಚಾರವಾಗಿದೆ. ರಾಜ್ಯ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ, ಸಂಬಂಧಪಟ್ಟ ನಾಯಕರಿಗೆ ಹೆಚ್ಚಿನ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

**ಕಾನೂನು ದುರ್ಬಳಕೆ ಬೇಡ:** ಗಣಪತಿ ಮೂರ್ತಿ ಮೆರವಣಿಗೆ ವೇಳೆ ಪೊಲೀಸ್ ಅಧಿಕಾರಿಯೊಬ್ಬರ ಹೇಳಿಕೆ ಖಂಡಿಸಿ ಪ್ರತಾಪ್ ಸಿಂಹ ಹೋರಾಟ ನಡೆಸಿದ್ದರು. ಈ ವೇಳೆ ನೀಡಿದ ಹೇಳಿಕೆಗೆ ಸಂಬಂಧಿಸಿದಂತೆ ಅವರ ವಿರುದ್ಧ ದೌರ್ಜನ್ಯ ತಡೆ ಕಾಯ್ದೆಯಡಿ ಎಫ್ಐಆರ್ ದಾಖಲಾಗಿದೆ ಎಂಬ ಮಾಹಿತಿ ಇದೆ. ಈ ವಿಚಾರವನ್ನು ಮತ್ತಷ್ಟು ಬೆಳೆಸದೆ, ಕಾನೂನನ್ನು ದುರ್ಬಳಕೆ ಮಾಡಿಕೊಳ್ಳಬಾರದು. ಎಲ್ಲರೂ ಸೌಹಾರ್ದದಿಂದ ಬಾಳಬೇಕು ಎಂದು ಛಲವಾದಿ ನಾರಾಯಣಸ್ವಾಮಿ ಮನವಿ ಮಾಡಿದರು.

**ಕಾಂಗ್ರೆಸ್ ಪ್ರತಿಭಟನೆಗೆ ಟೀಕೆ:** ಮುಖ್ಯ ಚುನಾವಣಾ ಆಯುಕ್ತರು ಹಾಗೂ ಎಸ್ಐಆರ್ ವಿರುದ್ಧ ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಯನ್ನು ಟೀಕಿಸಿದ ಅವರು, ಇಂತಹ ಪ್ರತಿಭಟನೆಗಳಿಂದ ದೇಶದಲ್ಲಿ ಗೊಂದಲ ಸೃಷ್ಟಿಯಾಗುತ್ತದೆ ಎಂದು ಆರೋಪಿಸಿದರು. ಚುನಾವಣಾ ಪ್ರಕ್ರಿಯೆ ಕುರಿತು ಕಾಂಗ್ರೆಸ್ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು ಎಂದರು.

**ಮೇಲ್ಮನೆ ಚುನಾವಣೆ ಸಿದ್ಧತೆ:** ವಿಧಾನ ಪರಿಷತ್‌ನ ಎರಡು ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆ ಹಿನ್ನೆಲೆಯಲ್ಲಿ ಎನ್‌ಡಿಎ ಮಿತ್ರಪಕ್ಷಗಳ ನಾಯಕರ ಸಭೆ ಕರೆಯಲಾಗಿದೆ. ಚುನಾವಣಾ ಸಿದ್ಧತೆ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ಬೀದಿದೀಪ ನಿರ್ವಹಣೆಯಲ್ಲಿ ಲೋಪ; ಗುತ್ತಿಗೆದಾರರಿಗೆ ರೂ 13 ಲಕ್ಷ ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ಬೀದಿದೀಪಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸಿದ ಮೂವರು ಗುತ್ತಿಗೆದಾರರಿಗೆ ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು ರೂ 13.01 ಲಕ್ಷ ದಂಡ ವಿಧಿಸಲಾಗಿದೆ.

ಸೆ.1ರಿಂದ 23ರವರೆಗೆ ಸಹಾಯ ಆಪ್‌ನಲ್ಲಿ ದಾಖಲಾಗಿದ್ದ ಸಾರ್ವಜನಿಕ ದೂರುಗಳನ್ನು ಪರಿಶೀಲಿಸಿ, ರಾತ್ರಿ ವೇಳೆ ನಡೆಸಿದ ತಪಾಸಣೆಯಲ್ಲಿ ಹಲವೆಡೆ ಬೀದಿದೀಪಗಳು ಬೆಳಗದಿರುವುದು ಹಾಗೂ ನಿಯಮಿತ ಪರಿಶೀಲನೆ-ದುರಸ್ತಿ ಕಾರ್ಯ ಕೈಗೊಳ್ಳದಿರುವುದು ಪತ್ತೆಯಾಗಿದೆ.

ಈ ಹಿನ್ನೆಲೆಯಲ್ಲಿ ಸ್ಟೆಕ್ಷಮ್ ಟೂಲ್ ಇಂಜಿನಿಯರ್ಸ್ ಪ್ರೈವೇಟ್ ಲಿಮಿಟೆಡ್‌ಗೆ ರೂ 9,56,955, ಎಫಿಲೂಮ್ ಪ್ರೈವೇಟ್ ಲಿಮಿಟೆಡ್‌ಗೆ ರೂ 3,29,199 ಹಾಗೂ ಟ್ರಾನ್ಸ್‌ಗ್ಲೋಬಲ್ ಪವರ್ ಲಿಮಿಟೆಡ್‌ಗೆ ರೂ 14,599 ದಂಡ ವಿಧಿಸಲಾಗಿದೆ. ಹಾಳಾದ ಎಲ್‌ಇಡಿ ದೀಪಗಳನ್ನು ತಕ್ಷಣ ದುರಸ್ತಿಪಡಿಸುವಂತೆ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಸೂಚಿಸಿದ್ದು, ನಿರ್ಲಕ್ಷ್ಯ ಮುಂದುವರಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ್ದಾರೆ.

## ಮೋಹನ ಗೌಡ ಪ್ರಕರಣದಲ್ಲಿ ಪೊಲೀಸರ ಕ್ರಮಕ್ಕೆ ತೀವ್ರ ಆಕ್ಷೇಪ; ಬಿಎನ್‌ಎಸ್‌ಎಸ್ ಸೆಕ್ಷನ್ 35 ಪಾಲನೆಗೆ ಒತ್ತು

● ವಿಕ್ರಮ ವಾಹಿನಿ । ಬೆಂಗಳೂರು

ವ್ಯಕ್ತಿಯ ಸ್ವಾತಂತ್ರ್ಯವನ್ನು ರಕ್ಷಿಸುವ ಕಾನೂನುಬದ್ಧ ಪ್ರಕ್ರಿಯೆಗಳನ್ನು ಪೊಲೀಸರು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ. ಮೋಹನ ಗೌಡ ಪ್ರಕರಣದ ವಿಚಾರಣೆ ವೇಳೆ ವೈಟ್‌ಫೀಲ್ಡ್ ಪೊಲೀಸರ ಕ್ರಮವನ್ನು ಪ್ರಶ್ನಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ, ಬಿಎನ್‌ಎಸ್‌ಎಸ್ ಸೆಕ್ಷನ್ 35(3)ರಡಿ ನೀಡುವ ನೋಟಿಸ್ ಜಾರಿಗೂ ಮುನ್ನವೇ ವ್ಯಕ್ತಿಯನ್ನು ವಶಕ್ಕೆ ಪಡೆಯುವ ಕ್ರಮದ ಬಗ್ಗೆ ಗಂಭೀರ ಆಕ್ಷೇಪ ವ್ಯಕ್ತಪಡಿಸಿತು.

ಕುನಾಲ್ ಕಮ್ರಾ ಅವರ ಪ್ರಸ್ತಾವಿತ ಕಾರ್ಯಕ್ರಮ ರದ್ದಾದ ಹಿನ್ನೆಲೆಯಲ್ಲಿ ಮೋಹನ ಗೌಡ ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದರು. ಈ ಪೋಸ್ಟ್‌ಗೆ ಸಂಬಂಧಿಸಿದಂತೆ ವೈಟ್‌ಫೀಲ್ಡ್ ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿದ್ದರು. ಬಳಿಕ ಉಡುಪಿಯಲ್ಲಿದ್ದ ಅವರನ್ನು ಪೊಲೀಸರು ವಶಕ್ಕೆ ಪಡೆದು ಬೆಂಗಳೂರಿಗೆ ಕರೆತಂದಿದ್ದರು ಎಂದು ಅರ್ಜಿಯಲ್ಲಿ ಆರೋಪಿಸಲಾಗಿತ್ತು.



**ನೋಟಿಸ್ ನೀಡುವ ಮುನ್ನವೇ ವಶಕ್ಕೆ?:** ಪ್ರಕರಣದಲ್ಲಿ ಬಿಎನ್‌ಎಸ್‌ಎಸ್ ಸೆಕ್ಷನ್ 35(3)ರಡಿ ನೋಟಿಸ್ ನೀಡಿ, ಮೂರು ದಿನಗಳೊಳಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿತ್ತು. ಆದರೆ ಆ ಅವಧಿ ಮುಗಿಯುವ ಮುನ್ನವೇ ಮೋಹನ ಗೌಡ ಅವರನ್ನು ಉಡುಪಿಯಿಂದ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ ಎಂಬುದು ಅರ್ಜಿದಾರರ ವಾದವಾಗಿತ್ತು.

ನೋಟಿಸ್‌ನಲ್ಲಿ ನೀಡಿದ್ದ ಹಾಜರಾತಿ ಅವಧಿ ಮುಗಿಯುವ ಮೊದಲೇ ವ್ಯಕ್ತಿಯನ್ನು ವಶಕ್ಕೆ ಪಡೆಯುವುದು ನೋಟಿಸ್ ನೀಡುವ ಉದ್ದೇಶವನ್ನೇ ವಿಫಲಗೊಳಿಸುತ್ತದೆ ಎಂದು ನ್ಯಾಯಾಲಯ ಗಮನಿಸಿತು. ವೈಟ್‌ಫೀಲ್ಡ್ ಠಾಣೆಯಲ್ಲಿ ಇಂತಹ ಕಾನೂನು ಉಲ್ಲಂಘನೆಗಳು ಪುನರಾವರ್ತನೆಯಾಗುತ್ತಿರುವ ಬಗ್ಗೆ ನ್ಯಾಯಾಲಯ ಆಕ್ಷೇಪ ವ್ಯಕ್ತಪಡಿಸಿ, ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ವೈಯಕ್ತಿಕವಾಗಿ ಹಾಜರಾಗುವಂತೆ ಸೂಚಿಸಿತ್ತು.

**ಬಂಧನ ಕೊನೆಯ ಕ್ರಮವಾಗಬೇಕು:** ಏಳು ವರ್ಷಗಳವರೆಗೆ ಶಿಕ್ಷೆ ವಿಧಿಸಬಹುದಾದ ಅಪರಾಧಗಳ ವಿಚಾರದಲ್ಲಿ ಬಿಎನ್‌ಎಸ್‌ಎಸ್ ಸೆಕ್ಷನ್ 35(3) ರಡಿ ನೋಟಿಸ್ ನೀಡುವ ವ್ಯವಸ್ಥೆ ಇದೆ. ಅಂತಹ ಸಂದರ್ಭಗಳಲ್ಲಿ ಬಂಧನವನ್ನು ಯಾಂತ್ರಿಕವಾಗಿ ಕೈಗೊಳ್ಳದೆ, ಕಾನೂನಿನಲ್ಲಿ ನಿಗದಿಪಡಿಸಿರುವ ಮಾನದಂಡಗಳನ್ನು ಪಾಲಿಸಬೇಕು ಎಂಬ ವಿಚಾರವನ್ನು ನ್ಯಾಯಾಲಯದ ಆದೇಶ ಒತ್ತಿಹೇಳಿದೆ.

ಅರ್ಜಿದಾರರ ಪರ ಹಿರಿಯ ವಕೀಲ ಗಿರೀಶ್ ಭಾರದ್ವಾಜ್ ಅವರು ವಾದ ಮಂಡಿಸಿ, ನೋಟಿಸ್ ನೀಡಲಾಗಿದೆ ಎಂದು ಹೇಳಿಕೊಂಡರೂ ಅದಕ್ಕೂ ಮುನ್ನವೇ ಮೋಹನ ಗೌಡ ಅವರನ್ನು ವಶಕ್ಕೆ ಪಡೆಯಲಾಗಿದೆ. ಸಾಮಾಜಿಕ ಜಾಲತಾಣದ ಪೋಸ್ಟ್ ಆಧರಿಸಿ ಬಂಧನದ ಕ್ರಮ ಕೈಗೊಳ್ಳುವಾಗ ಕಾನೂನುಬದ್ಧ ಪ್ರಕ್ರಿಯೆ ಪಾಲಿಸಿಲ್ಲ ಎಂದು ನ್ಯಾಯಾಲಯದ ಗಮನಕ್ಕೆ ತಂದಿದ್ದರು.

**ಪೊಲೀಸ್ ಅಧಿಕಾರಿಗಳಿಗೆ ಎಚ್ಚರಿಕೆ:** ಪ್ರಕರಣದ ವಿಚಾರಣೆ ವೇಳೆ ಡಿಸಿಪಿ, ಎಸಿಪಿ ಹಾಗೂ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳನ್ನು ನ್ಯಾಯಾಲಯಕ್ಕೆ ಹಾಜರಾಗುವಂತೆ ಸೂಚಿಸಲಾಗಿತ್ತು. ಹಿರಿಯ ಅಧಿಕಾರಿಗಳು ಹಾಜರಾಗದಿದ್ದರೆ ಬೆಂಗಳೂರು ನಗರ ಪೊಲೀಸ್ ಆಯುಕ್ತರನ್ನು ಕರೆಸುವ ಎಚ್ಚರಿಕೆಯನ್ನೂ ನ್ಯಾಯಾಲಯ ನೀಡಿತ್ತು.

ಈ ಪ್ರಕರಣದಲ್ಲಿ ಹೈಕೋರ್ಟ್ ಅಂತಿಮವಾಗಿ ಎಫ್ಐಆರ್ ಕುರಿತು ತೀರ್ಪು ನೀಡಿರುವುದಕ್ಕಿಂತ, ಮೋಹನ ಗೌಡ ಅವರನ್ನು ವಶಕ್ಕೆ ಪಡೆದ ರೀತಿಯಲ್ಲಿ ಸೆಕ್ಷನ್ 35(3)ರ ಪ್ರಕ್ರಿಯೆ ಪಾಲನೆಯಾಗಿದೆಯೇ ಎಂಬುದರ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎತ್ತಿರುವುದು ಪ್ರಮುಖವಾಗಿದೆ.

**ಪೊಲೀಸ್ ಇಲಾಖೆಯಿಂದಲೂ ಮಾರ್ಗಸೂಚಿ**

ಸಾಮಾಜಿಕ ಜಾಲತಾಣದ ಪೋಸ್ಟ್‌ಗಳಿಗೆ ಸಂಬಂಧಿಸಿದಂತೆ ಯಾಂತ್ರಿಕವಾಗಿ ಎಫ್ಐಆರ್ ದಾಖಲಿಸುವುದು ಮತ್ತು ಬಂಧಿಸುವುದನ್ನು ತಪ್ಪಿಸಬೇಕು ಎಂದು ಕರ್ನಾಟಕ ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಂ ಅವರು ಈ ಹಿಂದೆಯೇ ಸುತ್ತೋಲೆ ಮೂಲಕ ಅಧಿಕಾರಿಗಳಿಗೆ ಸೂಚಿಸಿದ್ದರು. ದೂರುದಾರರು ಕಾನೂನಿನ ಅರ್ಥದಲ್ಲಿ 'ಬಾಧಿತ ವ್ಯಕ್ತಿ'ಯೇ ಎಂಬುದನ್ನು ಪರಿಶೀಲಿಸುವುದು ಸೇರಿದಂತೆ ಪ್ರಾಥಮಿಕ ವಿಚಾರಣೆಯ ಅಗತ್ಯವನ್ನು ಸುತ್ತೋಲೆಯಲ್ಲಿ ಒತ್ತಿಹೇಳಲಾಗಿತ್ತು.

ಮೋಹನ ಗೌಡ ಪ್ರಕರಣದ ವಿಚಾರಣೆ, ವ್ಯಕ್ತಿಯ ಸ್ವಾತಂತ್ರ್ಯ ಮತ್ತು ಪೊಲೀಸ್ ಅಧಿಕಾರದ ಬಳಕೆಯ ನಡುವೆ ಕಾನೂನು ನಿಗದಿಪಡಿಸಿರುವ ಮಿತಿಗಳನ್ನು ಮತ್ತೊಮ್ಮೆ ಮುನ್ನೆಲೆಗೆ ತಂದಿದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರಿನ ಅರಮನೆ ಮೈದಾನದಲ್ಲಿ ಶನಿವಾರ ನಡೆದ ಕರ್ನಾಟಕ ಪರ್ವ 2026 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ಸಚಿವ ಯು ಟಿ ಖಾದರ್, ರಿಜ್ವಾನ್ ಅರ್ಷದ್, ಸಂಸದ ಮನ್ಸೂರ್ ಅಲಿ ಖಾನ್, ಸೈಯದ್ ನಾಸೀರ್ ಹುಸೇನ್, ರಾಜ್ಯ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಮೆಹರೋಜ್ ಖಾನ್, ಶಾಸಕರಾದ ಖನೀಜ್ ಫಾತಿಮಾ, ರಹೀಂ ಖಾನ್, ಪಠಾಣ್ ಯಾಸೀನ್ ಅಹಮದ್ ಖಾನ್, ತೆಲಂಗಾಣದ ಸಚಿವ ಮೊಹಮದ್ ಅಜರುದ್ದೀನ್, ನಟಿ ರಮ್ಯಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಬಾಲ್ಕನಿ ತಡೆಗೋಡೆ ಕುಸಿದು 5 ವಿದ್ಯಾರ್ಥಿಗಳಿಗೆ ಗಾಯ; ಬಾಲಕ ಬ್ರೈನ್ ಡೆಡ್

● ವಿಕ್ರಮ ವಾಹಿನಿ । ಮಂಗಳೂರು

ಕಾಲೇಜು ಚುನಾವಣೆ ಹಾಗೂ ಪದಗ್ರಹಣ ಸಮಾರಂಭದ ವೇಳೆ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಲ್ಕನಿ ಬಳಿ ಜಮಾಯಿಸಿದ್ದಾಗ ತಡೆಗೋಡೆ ಕುಸಿದು ಐವರು ವಿದ್ಯಾರ್ಥಿಗಳು ಕೆಳಗೆ ಬಿದ್ದ ಘಟನೆ ಪಾಂಡೇಶ್ವರದ ರಮಾ ಲಕ್ಷ್ಮೀನಾರಾಯಣ ಕನ್ವೆನ್ಷನ್ ಹಾಲ್‌ನಲ್ಲಿ ನಡೆದಿದೆ. ಘಟನೆಯಲ್ಲಿ 16 ವರ್ಷದ ಮೊಹಮ್ಮದ್ ಶಮಾಜ್ ತಲೆಗೆ ಗಂಭೀರವಾಗಿ ಗಾಯಗೊಂಡು ಬ್ರೈನ್ ಡೆಡ್ ಆಗಿದ್ದು, ವೆಂಟಿಲೇಟರ್ ಮೂಲಕ ಚಿಕಿತ್ಸೆ ಮುಂದುವರಿಸಲಾಗಿದೆ. ಮೊಹಮ್ಮದ್ ಶನಾನ್ ಅಹ್ಮದ್ (18), ಹನೀಫ್ (23), ದಾವೂದ್ ಫರ್ಸಿನ್ ಅಹ್ಮದ್ (18) ಹಾಗೂ ಮೊಹಮ್ಮದ್ ಶಾಕೀಲ್ ಹುಸೇನ್ (18) ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ವಿದ್ಯಾರ್ಥಿಗಳು ಬಾಲ್ಕನಿ ಬಳಿ ಹೆಚ್ಚಿನ ಸಂಖ್ಯೆಯಲ್ಲಿ ನಿಂತಿದ್ದರಿಂದ ತಡೆಗೋಡೆ ಕುಸಿದಿರುವ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಪಾಂಡೇಶ್ವರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಕಟ್ಟಡದ ಸುರಕ್ಷತೆ ಹಾಗೂ ಕಾರ್ಯಕ್ರಮ ಆಯೋಜಕರ ನಿರ್ಲಕ್ಷ್ಯದ ಕುರಿತು ತನಿಖೆ ಮುಂದುವರಿಸಿದ್ದಾರೆ.

PRGI NO: KARKAN/2018/78481


# ‘ವೀರಶೈವ ಲಿಂಗಾಯತ ಸಮಾಜದ ಒಗ್ಗಟ್ಟು ಕಾಪಾಡುವುದು ಎಲ್ಲರ ಜವಾಬ್ದಾರಿ’

● ವಿಕ್ರಮ ವಾಹಿನಿ । ಬೆಂಗಳೂರು

ವೀರಶೈವ ಲಿಂಗಾಯತ ಧರ್ಮ, ಪರಂಪರೆ ಹಾಗೂ ಸಮಾಜದ ಅಸ್ತಿತ್ವವನ್ನು ಕಾಪಾಡಲು ಒಳಗಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆಯಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕರೆ ನೀಡಿದರು.

ನಗರದ ವಿಜಯನಗರದ ಸುಜ್ಞಾನ ಮಂಟಪದಲ್ಲಿ ನಡೆದ ವೀರಶೈವ ಲಿಂಗಾಯತ ಧರ್ಮ ಸಂರಕ್ಷಣಾ ಸಮ್ಮೇಳನದಲ್ಲಿ ಮಾತನಾಡಿದ ಅವರು, ವೀರಶೈವ ಲಿಂಗಾಯತ ಸಮಾಜವು ಶತಮಾನಗಳಿಂದ ಅನ್ನದಾಸೋಹ, ಅಕ್ಷರದಾಸೋಹ ಹಾಗೂ ಜ್ಞಾನದಾಸೋಹದ ಮೂಲಕ ಸಮಾಜದ ಎಲ್ಲ ವರ್ಗಗಳಿಗೂ ಆಶ್ರಯ ಮತ್ತು ಮಾರ್ಗದರ್ಶನ ನೀಡುತ್ತ ಬಂದಿದೆ ಎಂದರು.

ಪ್ರಸ್ತುತ ವೀರಶೈವ ಧರ್ಮ ಮತ್ತು ಪರಂಪರೆಯ ಕುರಿತು ಹಲವು ಚರ್ಚೆಗಳು ನಡೆಯುತ್ತಿದ್ದು, ಧರ್ಮದ ಮೂಲ ಆಶಯಗಳ ಕುರಿತು ಸಮಾಜದೊಳಗೆ ಮುಕ್ತ ಹಾಗೂ ಗಂಭೀರ ಚರ್ಚೆ ನಡೆಯಬೇಕು.

ಸಮಾಜ ಎದುರಿಸುತ್ತಿರುವ ಸಮಸ್ಯೆಗಳು, ಅವುಗಳ ಕಾರಣಗಳು ಹಾಗೂ ಪರಿಹಾರಗಳ ಬಗ್ಗೆ ಆತ್ಮಾವಲೋಕನ ಅಗತ್ಯವಾಗಿದೆ. ಇತಿಹಾಸವನ್ನು ಅರಿತುಕೊಳ್ಳುವುದು ಹಿಂದಿನ ತಪ್ಪುಗಳು ಮರುಕಳಿಸದಂತೆ ಎಚ್ಚರಿಕೆ ವಹಿಸುವುದಕ್ಕಾಗಿದೆ ಎಂದು ಹೇಳಿದರು.

**ಮಠಮಾನ್ಯಗಳಿಗೆ ಬೆಂಬಲ ಅಗತ್ಯ:**

ವೀರಶೈವ ಲಿಂಗಾಯತ ಮಠಮಾನ್ಯಗಳು ಸಮಾಜಕ್ಕೆ ಮಾರ್ಗದರ್ಶನ ನೀಡುವ ಪ್ರಮುಖ ಸಂಸ್ಥೆಗಳಾಗಿವೆ. ರಾಜ್ಯದ ವಿವಿಧ ಭಾಗಗಳಲ್ಲಿರುವ ಮಠಗಳು ಆರ್ಥಿಕ ಹಾಗೂ ಸಾಮಾಜಿಕ ಸವಾಲುಗಳನ್ನು ಎದುರಿಸುತ್ತಿದ್ದು, ಅವುಗಳಿಗೆ ಅಗತ್ಯ ಬೆಂಬಲ ನೀಡುವುದು ಸಮಾಜದ ಮುಖಂಡರ ಜವಾಬ್ದಾರಿಯಾಗಿದೆ ಎಂದರು.

ತಮ್ಮ ತಂದೆ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಸೇರಿದಂತೆ ವಿವಿಧ ಸಮಾಜಗಳ ಮಠಮಾನ್ಯಗಳಿಗೆ ನೆರವು ನೀಡಿದ್ದರು ಎಂದು ಸ್ಮರಿಸಿದ ವಿಜಯೇಂದ್ರ, ರಾಜಕೀಯ ಮತ್ತು ಚುನಾವಣೆಗಳು ಬಂದು ಹೋಗುತ್ತವೆ. ಆದರೆ ಸಮಾಜಕ್ಕೆ ಮಾರ್ಗದರ್ಶನ ನೀಡುವ ಮಠಮಾನ್ಯಗಳ ಶಕ್ತಿ ಉಳಿಯಬೇಕು ಎಂದರು.

ಜಗದ್ಗುರುಗಳು, ಹರಗುರು ಚರಮೂರ್ತಿಗಳು, ಸಮಾಜದ ಮುಖಂಡರು, ರಾಜಕೀಯ ನಾಯಕರು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು.

ಮಠಮಾನ್ಯಗಳಿಗೆ ಅಗತ್ಯ ಬೆಂಬಲ ನೀಡುವ ನಿಟ್ಟಿನಲ್ಲಿ ಜಗದ್ಗುರುಗಳ ಆಶೀರ್ವಾದದೊಂದಿಗೆ ಮುಂದಿನ ದಿನಗಳಲ್ಲಿ ತಮ್ಮಿಂದ ಸಾಧ್ಯವಾದಷ್ಟು ಕೆಲಸ ಮಾಡುವುದಾಗಿ ಭರವಸೆ ನೀಡಿದರು.



## “ಸಮಾಜದ ವಿಶ್ವಾಸ ಉಳಿಸಿಕೊಳ್ಳಬೇಕು”

ಲಿಂಗಸುಗೂರಿನಿಂದ ಬಳ್ಳಾರಿವರೆಗೆ ನಡೆದ ಪಾದಯಾತ್ರೆಯ ಸಂದರ್ಭದಲ್ಲಿ ವಿವಿಧ ಸಮುದಾಯಗಳ ಜನರು ತೋರಿದ ಪ್ರೀತಿ ಮತ್ತು ವಿಶ್ವಾಸವನ್ನು ಸ್ಮರಿಸಿದ ಅವರು, ಕಂದಮ್ಮಗಳನ್ನು ಎತ್ತಿಕೊಂಡು ಗಂಟೆಗಟ್ಟಲೆ ಕಾದು ಸ್ವಾಗತಿಸಿದ ತಾಯಂದಿರ ಪ್ರೀತಿ ತಮ್ಮ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದರು. ತಾನು ಶಾಸಕ ಅಥವಾ ಬಿಜೆಪಿ ರಾಜ್ಯಾಧ್ಯಕ್ಷನಾಗಿ ಮಾತ್ರವಲ್ಲದೆ, ಈ ನಾಡಿಗೆ ನಾಯಕತ್ವ ನೀಡಿದ ಮಠಮಾನ್ಯಗಳ ಆಶೀರ್ವಾದ ಪಡೆದ ಕುಟುಂಬದ ಸದಸ್ಯನಾಗಿ ಹಾಗೂ ದಶಕಗಳ ಕಾಲ ರೈತರು ಮತ್ತು ಸಮಾಜದ ಪರ ಹೋರಾಡಿದ ಬಿ.ಎಸ್. ಯಡಿಯೂರಪ್ಪ ಅವರ ಪುತ್ರನಾಗಿ ಮಾತನಾಡುತ್ತಿದ್ದೇನೆ ಎಂದು ವಿಜಯೇಂದ್ರ ಹೇಳಿದರು. ವೀರಶೈವ ಲಿಂಗಾಯತ ಸಮಾಜದ ವಿಚಾರಗಳನ್ನು ರಾಜಕೀಯ ಲಾಭ–ನಷ್ಟದ ದೃಷ್ಟಿಯಿಂದ ನೋಡದೆ, ಸಮಾಜದ ಭವ್ಯ ಪರಂಪರೆ ಮತ್ತು ಮುಂದಿನ ಪೀಳಿಗೆಯ ಹಿತದ ದೃಷ್ಟಿಯಿಂದ ನೋಡಬೇಕು. ಸಮಾಜದ ಒಗ್ಗಟ್ಟು, ಧರ್ಮದ ಪರಂಪರೆ ಹಾಗೂ ಮಠಮಾನ್ಯಗಳ ಶಕ್ತಿ ಉಳಿದರೆ ಮಾತ್ರ ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಸಮರ್ಥವಾಗಿ ಹಸ್ತಾಂತರಿಸಲು ಸಾಧ್ಯ ಎಂದು ಅವರು ಹೇಳಿದರು.

# ಹಾಲಿನ ದರ ಏರಿಕೆ: ಮುಂದಿನ ಸಂಪುಟ ಸಭೆಯಲ್ಲಿ ನಿರ್ಧಾರ



● ವಿಕ್ರಮ ವಾಹಿನಿ । ಬೆಂಗಳೂರು

ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ ರೂ 10 ಹೆಚ್ಚಿಸುವಂತೆ ಹಾಲು ಒಕ್ಕೂಟಗಳು ಸಲ್ಲಿಸಿರುವ ಪ್ರಸ್ತಾವನೆಯನ್ನು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ.

ಜಿಲ್ಲಾ ಹಾಲು ಒಕ್ಕೂಟಗಳ ಅಧ್ಯಕ್ಷರು ಹಾಗೂ ಕೆಎಂಎಫ್ ನಿರ್ದೇಶಕರ ನಿಯೋಗವು ಮಾಜಿ ಸಂಸದ ಡಿ.ಕೆ. ಸುರೇಶ್ ನೇತೃತ್ವದಲ್ಲಿ ಮುಖ್ಯಮಂತ್ರಿಯನ್ನು ಭೇಟಿ ಮಾಡಿ ದರ ಏರಿಕೆ ಕುರಿತು ಚರ್ಚಿಸಿತು. ಪ್ರತಿ ಲೀಟರ್‌ಗೆ ರೂ 10 ಹೆಚ್ಚಿಸಿ, ಅದರಲ್ಲಿ ರೂ 7 ರೈತರಿಗೆ ಹಾಗೂ ರೂ 3 ಒಕ್ಕೂಟಗಳ ನಷ್ಟ ಸರಿದೂಗಿಸಲು ನೀಡುವಂತೆ ನಿಯೋಗ ಮನವಿ ಮಾಡಿತು. ಹಾಲು ಉತ್ಪಾದನೆ ಹಾಗೂ ಸಾಗಣೆ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ದರ ಪರಿಷ್ಕರಣೆ ಅನಿವಾರ್ಯವಾಗಿದೆ ಎಂದು ನಿಯೋಗ ತಿಳಿಸಿತು. ಆದರೆ ಏಕಾಏಕಿ ರೂ 10 ಹೆಚ್ಚಿಸಲು ಸಾಧ್ಯವಿಲ್ಲ. ಗ್ರಾಹಕರಿಗೆ ಹೊರೆಯಾಗದಂತೆ ಹಾಗೂ ರೈತರು ಮತ್ತು ಹಾಲು ಒಕ್ಕೂಟಗಳ ಹಿತ ಕಾಪಾಡುವ ರೀತಿಯಲ್ಲಿ ಸಂಪುಟದಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಶಿವಕುಮಾರ್ ಹೇಳಿದರು.

ಮುಖ್ಯಮಂತ್ರಿ ಭೇಟಿಯ ಬಳಿಕ ಮಾತನಾಡಿದ ಡಿ.ಕೆ. ಸುರೇಶ್, ರೈತರ ಹಿತದೃಷ್ಟಿಯಿಂದ ಹಾಲಿನ ದರ ಏರಿಕೆ ಅಗತ್ಯವಾಗಿದ್ದು, ಇದಕ್ಕೆ ಗ್ರಾಹಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಪ್ರಸ್ತುತ ಚರ್ಚೆಯಲ್ಲಿ ರೂ 5 ದರ ಏರಿಕೆಯ ಪ್ರಸ್ತಾವನೆ ಇರಲಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ದರ ಪರಿಷ್ಕರಣೆ ಕುರಿತು ಅಂತಿಮ ತೀರ್ಮಾನ ಕೈಗೊಳ್ಳುವ ಮುನ್ನ ರೈತರಿಗೆ ನೀಡುವ ಹಾಲಿನ ಖರೀದಿ ದರ, ಹಾಲು ಒಕ್ಕೂಟಗಳ ಆರ್ಥಿಕ ಸ್ಥಿತಿ ಹಾಗೂ ಗ್ರಾಹಕರ ಮೇಲಿನ ಹೆಚ್ಚುವರಿ ಹೊರೆಯನ್ನು ಸಮಗ್ರವಾಗಿ ಪರಿಗಣಿಸಲಾಗುವುದು. ಸಂಪುಟ ಸಭೆಯ ನಿರ್ಧಾರದ ಬಳಿಕ ಪರಿಷ್ಕೃತ ದರ ಜಾರಿಗೆ ಬರುವ ಕುರಿತು ಸ್ಪಷ್ಟತೆ ಸಿಗಲಿದೆ.

# ಹೋಮ್‌ಸ್ಟೇನಲ್ಲಿ ಯುವತಿ ಶವ ಪತ್ತೆ; ಪ್ರಿಯಕರ ಬಂಧನ

**ಗುವಾಹಟಿ ಹೊರವಲಯದ ಹೋಮ್‌ಸ್ಟೇನಲ್ಲಿ 22 ವರ್ಷದ ವಿಶ್ವವಿದ್ಯಾಲಯ ವಿದ್ಯಾರ್ಥಿನಿ ಶವವಾಗಿ ಪತ್ತೆಯಾಗಿದ್ದು, ಆಕೆಯೊಂದಿಗೆ ಇದ್ದ 26 ವರ್ಷದ ಆಸಿಫ್ ಅಲಿ ಬಂಧನಕ್ಕೊಳಗಾಗಿದ್ದಾನೆ. ಆತ್ಮಹತ್ಯೆ ಎಂದು ಆರೋಪಿ ಹೇಳಿಕೆ ನೀಡಿದ್ದರೂ, ಯುವತಿ ಸಾವಿಗೂ ಮುನ್ನ ತಾಯಿಗೆ ಆತಂಕ ವ್ಯಕ್ತಪಡಿಸಿದ್ದ ಹಿನ್ನೆಲೆಯಲ್ಲಿ ಪೊಲೀಸರು ಕೊಲೆ ಸೇರಿದಂತೆ ಎಲ್ಲ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆ ವರದಿಗಾಗಿ ಕಾಯಲಾಗುತ್ತಿದೆ.**

● ವಿಕ್ರಮ ವಾಹಿನಿ । ಗುವಾಹಟಿ

ಗುವಾಹಟಿ ವಿಶ್ವವಿದ್ಯಾಲಯದ 22 ವರ್ಷದ ವಿದ್ಯಾರ್ಥಿನಿಯೊಬ್ಬರು ನಗರದ ಹೊರವಲಯದ ಹೋಮ್‌ಸ್ಟೇನಲ್ಲಿ ಶನಿವಾರ ಮುಂಜಾನೆ ಶವವಾಗಿ ಪತ್ತೆಯಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಆಕೆಯ 26 ವರ್ಷದ ಪ್ರಿಯಕರ ಆಸಿಫ್ ಅಲಿ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ಧಾರಾಪುರ ನಿವಾಸಿ ಹಾಗೂ ಸಮಾಜಶಾಸ್ತ್ರ ವಿಭಾಗದ ವಿದ್ಯಾರ್ಥಿನಿ ನಿಮಿಷಾ ಠಾಕುರಿಯಾ ಅವರು ಗರಾಲ್‌ನಲ್ಲಿರುವ ಹೋಮ್‌ಸ್ಟೇನಲ್ಲಿ ಆಸಿಫ್ ಅಲಿ ಜತೆ ಉಳಿದುಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಯುವತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಆರೋಪಿ ಹೇಳಿಕೆ ನೀಡಿದ್ದರೂ, ಪೊಲೀಸರು ಆ ಹೇಳಿಕೆಯನ್ನು ಸಂಪೂರ್ಣವಾಗಿ ನಂಬದೆ ತನಿಖೆ ಮುಂದುವರಿಸಿದ್ದಾರೆ.

ಯುವತಿಯ ಸಾವಿನ ಕುರಿತು ಹಲವು ಅನುಮಾನಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ವರದಿಗಾಗಿ ಪೊಲೀಸರು ಕಾಯುತ್ತಿದ್ದಾರೆ. ಸ್ಥಳದಲ್ಲಿ ರಕ್ತದ ಕಲೆಗಳು ಪತ್ತೆಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ತಾಯಿಗೆ ಕರೆ ಮಾಡಿ ಆತಂಕ ವ್ಯಕ್ತಪಡಿಸಿದ್ದ ಯುವತಿ**

ಘಟನೆಗೂ ಮುನ್ನ ಯುವತಿ ತನ್ನ ತಾಯಿಗೆ ದೂರವಾಣಿ ಕರೆ ಮಾಡಿ, “ಅವರು ನನ್ನನ್ನು ಕೊಲ್ಲುತ್ತಾರೆ” ಎಂದು ಹೇಳಿದ್ದಳು ಎನ್ನಲಾಗಿದ್ದು, ಬಳಿಕ ಆಕೆಯ ಮೊಬೈಲ್ ಫೋನ್ ಸಂಪರ್ಕ ಕಡಿತಗೊಂಡಿತ್ತು ಎಂದು ಕುಟುಂಬದ ಆಪ್ತರು ತಿಳಿಸಿದ್ದಾರೆ. ಈ ಹೇಳಿಕೆಯನ್ನೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಹೋಮ್‌ಸ್ಟೇಯಲ್ಲಿ ರಾತ್ರಿ ವೇಳೆ ಮಹಿಳೆಯೊಬ್ಬರು ಕೂಗಾಡಿ ಸಹಾಯಕ್ಕಾಗಿ ಕರೆದಿರುವುದು ಕೇಳಿಸಿತ್ತು ಎಂದು ಉಸ್ತುವಾರಿ ವ್ಯಕ್ತಿ ಪೊಲೀಸರಿಗೆ ತಿಳಿಸಿದ್ದಾರೆ ಎನ್ನಲಾಗಿದೆ. ಹೋಮ್‌ಸ್ಟೇ ಮಾಲೀಕರು, ಸಿಬ್ಬಂದಿ ಹಾಗೂ ಇತರರನ್ನು ವಿಚಾರಣೆಗೊಳಪಡಿಸಿರುವ ಪೊಲೀಸರು ಘಟನೆಯ ಸಂಪೂರ್ಣ ಹಿನ್ನೆಲೆ ಪರಿಶೀಲಿಸುತ್ತಿದ್ದಾರೆ.

ಮೃತ ಯುವತಿ ಹಿಂದೂ ಹಾಗೂ ಬಂಧಿತ ಆರೋಪಿ ಮುಸ್ಲಿಂ ಎಂಬ ಹಿನ್ನೆಲೆಯಲ್ಲಿ ಕೆಲವು ಸಂಘಟನೆಗಳು ಪ್ರಕರಣವನ್ನು ‘ಲವ್ ಜಿಹಾದ್’ ಎಂದು ಆರೋಪಿಸಿ ಪ್ರತಿಭಟನೆ ನಡೆಸಿವೆ. ಆದರೆ ಪ್ರಕರಣದ ನಿಖರ ಕಾರಣ ಇನ್ನೂ ತನಿಖೆಯಿಂದ ದೃಢಪಡಬೇಕಿದೆ. “ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂಬ ಮಾಹಿತಿ ಬಂದಿದೆ. ಆದರೆ ಆ ಹೇಳಿಕೆಯನ್ನು ನಾವು ನಂಬಿ ತನಿಖೆ ನಿಲ್ಲಿಸುವುದಿಲ್ಲ. ಎಲ್ಲ ಆಯಾಮಗಳಲ್ಲೂ ತನಿಖೆ ಮುಂದುವರಿಸುತ್ತೇವೆ” ಎಂದು ಗುವಾಹಟಿ ಪಶ್ಚಿಮ ವಿಭಾಗದ ಡಿಸಿಪಿ ಬೋಲಿನ್ ದಿಯೋರಿ ತಿಳಿಸಿದ್ದಾರೆ.

# ‘ಕುಮಾರಸ್ವಾಮಿ–ವಿಜಯೇಂದ್ರ ನಡುವೆ ಸಿಎಂ ರೇಸ್ ಬೇಡ’

● ವಿಕ್ರಮ ವಾಹಿನಿ । ಬೆಂಗಳೂರು

ಎಚ್.ಡಿ. ಕುಮಾರಸ್ವಾಮಿ ಹಾಗೂ ತಮ್ಮ ನಡುವೆ ಮುಖ್ಯಮಂತ್ರಿ ಹುದ್ದೆಯ ರೇಸ್ ಸೃಷ್ಟಿಸಬಾರದು. ಮುಂದಿನ ಮುಖ್ಯಮಂತ್ರಿ ಯಾರು ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಸಿಎಂ ವಿಚಾರವಾಗಿ ಮುಖಂಡರು ಹಾಗೂ ಕಾರ್ಯಕರ್ತರು ಬಹಿರಂಗವಾಗಿ ಯಾವುದೇ ಚರ್ಚೆ ಅಥವಾ ಘೋಷಣೆ ಮಾಡಬಾರದು ಎಂದು ಸೂಚಿಸಿದರು. ಈ ಬಗ್ಗೆ ಕಾರ್ಯಕರ್ತರು ಗೊಂದಲಕ್ಕೊಳಗಾಗುವ ಅಗತ್ಯವಿಲ್ಲ ಎಂದರು.

ಮುಂಬರುವ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ನಡೆದ ಸಭೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಹಾಗೂ ಮುಂದಿನ ಚುನಾವಣಾ ಕಾರ್ಯತಂತ್ರಗಳ ಕುರಿತು ಚರ್ಚಿಸಲಾಯಿತು. ಕರ್ನಾಟಕದ ನಾಲ್ಕು ವಿಧಾನ ಪರಿಷತ್ ಸ್ಥಾನಗಳಿಗೆ ಅಕ್ಟೋಬರ್ 23ರಂದು ಮತದಾನ ನಡೆಯಲಿದೆ.

ಸಭೆಯಲ್ಲಿ ಮಾತನಾಡಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಮುಂದಿನ ಎಲ್ಲ ಚುನಾವಣೆಗಳನ್ನು ಎನ್‌ಡಿಎ ಮೈತ್ರಿಕೂಟ ಒಗ್ಗಟ್ಟಿನಿಂದ ಎದುರಿಸಬೇಕು ಎಂದು ಹೇಳಿದರು. ಬಿಹಾರ ಮಾದರಿಯಲ್ಲಿ ಚುನಾವಣಾ ಕಾರ್ಯತಂತ್ರ ರೂಪಿಸಿ, ರಾಜ್ಯದಲ್ಲಿ 180 ಸ್ಥಾನಗಳ ಗುರಿ ಸಾಧಿಸಬೇಕು ಎಂದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕರೆ ನೀಡಿದರು.

# ‘ಸರ್ಕಾರದ ವಿರುದ್ಧ ರಾಹುಲ್ ಗಾಂಧಿಗೆ ದೂರು’

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿಲ್ಲ. ಸರ್ಕಾರದ ವಿರುದ್ಧ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ದೂರು ನೀಡುವುದಾಗಿ ಕಾಂಗ್ರೆಸ್‌ಪಕ್ಷದ ಶಾಸಕ ಬಿ.ಆರ್.ಪಾಟೀಲ್ ದೂರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮದೇ ಸರ್ಕಾರದ ವಿರುದ್ಧ ಕಿಡಿ ಕಾರಿದ್ದಾರೆ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಹಣಕಾಸು ಸಚಿವರಾಗಿ ರೂಪಿಸಿದ್ದ ಬಜೆಟ್ ಅನ್ನು ಬದಲಾವಣೆ ಮಾಡುವಲ್ಲಿಯೂ ಕೆಲವು ಕಾಣದ ಕೈಗಳು ಕೆಲಸ ಮಾಡಿದ್ದವು ಎಂದು ಗಂಭೀರ ಆರೋಪ ಮಾಡಿದ್ದಾರೆ.



ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ತಾನು ಯೋಜನಾ ಆಯೋಗದ ಉಪಾಧ್ಯಕ್ಷನಾಗಿದ್ದೆ. ಬಜೆಟ್ ತಯಾರಿಕೆಯ ಸಭೆಯಲ್ಲಿ ಭಾಗವಹಿಸಿದ್ದೆ. ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ ಭೂ ಸುಧಾರಣಾ ಕಾಯ್ದೆಯ ತಿದ್ದುಪಡಿ 79ಎ, ಬಿ, ಸಿ ಸೆಕ್ಷನ್‌ಗಳನ್ನು ತೆಗೆದು ಹಾಕುವುದಾಗಿ ಭರವಸೆ ನೀಡಲಾಗಿತ್ತು.

ಈ ಸೆಕ್ಷನ್‌ಗಳಿಂದ ಕೃಷಿಕಲ್ಲದವರು ಭೂಮಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಶ್ರೀಮಂತರು ರೈತರ ಭೂಮಿ ಕಸಿಯುತ್ತಿದ್ದಾರೆ. ಬಡವರು ಭೂಮಿ ಮಾರಾಟ ಮಾಡಿಕೊಳ್ಳುತ್ತಿದ್ದಾರೆ. ತಿದ್ದುಪಡಿಯನ್ನು ರದ್ದು ಪಡಿಸಿ ಮೂಲ ಕಾನೂನನ್ನು ಮರು ಸ್ಥಾಪಿಸಲಾಗುತ್ತದೆ ಎಂದು ಕಾಂಗ್ರೆಸ್ ಹೇಳಿತ್ತು.

ಸಿದ್ದರಾಮಯ್ಯ ಬಜೆಟ್ ತಯಾರಿಕೆಯ ವೇಳೆ ಈ ಬಗ್ಗೆ ಚರ್ಚೆಯಾಗಿತ್ತು. ಸಿದ್ದರಾಮಯ್ಯ ಅವರು ಕಾನೂನು ತಿದ್ದುಪಡಿಗೆ ಒಪ್ಪಿದ್ದರು. ಬಜೆಟ್ ಭಾಷಣದ ಪ್ರತಿಯಲ್ಲಿ ಸೇರ್ಪಡೆಯಾಯಿತು. ಸರಿ–ತಪ್ಪುಗಳನ್ನು ಪರಾಮರ್ಶಿಸುವ ಪ್ರೂಫ್ ರೀಡಿಂಗ್ ಮುಗಿಯಿತು. ಕೊನೇ ಕ್ಷಣದಲ್ಲಿ ಮುದ್ರಣಕ್ಕೂ ಹೋಗಿತ್ತು. ಆದರೆ ಬೆಳಗ್ಗೆ ಮಂಡನೆಯಾದ ಬಜೆಟ್‌ನಲ್ಲಿ ಭೂ ಸುಧಾರಣಾ ಕಾಯ್ದೆಯ ತಿದ್ದುಪಡಿ ಅಂಶ ಇರಲಿಲ್ಲ. ರಾತ್ರೊ–ರಾತ್ರಿ ಕಾಣದ ಕೈಗಳು ಪ್ರಭಾವ ಬೀರಿ ಬದಲಾವಣೆ ಮಾಡಿದ್ದವು ಎಂದು ಹೇಳಿದರು.

ಸಿದ್ದರಾಮಯ್ಯ ಅವರು ಸಿದ್ಧಪಡಿಸಿದ್ದ ಬಜೆಟ್ ಅನ್ನು ಬದಲಾವಣೆ ಮಾಡಿದ್ದರ ಹಿಂದೆ ಪ್ರಭಾವಿಗಳ ಕೈವಾಡ ಇತ್ತು ಎಂದು ದೂರಿದರು. ನಂತರ ನಾನು ಯೋಜನಾ ಆಯೋಗದ ಉಪಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನಿಡಿದ್ದೆ. ಅದನ್ನು ವಾಪಸ್ ಪಡೆಯಲು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ತಮ ಮನವೊಲಿಸುವ ಪ್ರಯತ್ನ ಮಾಡಿದ್ದರು.

ಇದನ್ನು ತಾವು ಇಲ್ಲಿಗೇ ಬಿಡುವುದಿಲ್ಲ, ಎಐಸಿಸಿ ಮುಖಂಡರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿಯವರಿಗೆ ಪತ್ರ ಬರೆಯುತ್ತೆನೆ ಎಂದು ಎಚ್ಚರಿಸಿದ್ದಾರೆ. ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು ಎಂದು ಅವರು ಪುನರುಚ್ಚರಿಸಿದರು.

# ಸಿಇಸಿ ವಜಾಕ್ಕೆ ಸಿದ್ದರಾಮಯ್ಯ ಆಗ್ರಹ


● ವಿಕ್ರಮ ವಾಹಿನಿ । ಬೆಂಗಳೂರು

ಚುನಾವಣಾ ಆಯೋಗದ ಸ್ವಾಯತ್ತತೆ ಹಾಗೂ ಕಾರ್ಯವೈಖರಿ ಕುರಿತು ಪ್ರಶ್ನೆಗಳು ಮೂಡಿವೆ ಎಂದು ಆರೋಪಿಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಿ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಕೆಪಿಸಿಸಿ ವತಿಯಿಂದ ಶನಿವಾರ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗವು ಯಾವುದೇ ಸರ್ಕಾರ ಅಥವಾ ರಾಜಕೀಯ ಪಕ್ಷದ ಪರವಾಗಿ ಕಾರ್ಯನಿರ್ವಹಿಸದೆ ಸಂವಿಧಾನಕ್ಕೆ ಬದ್ಧವಾಗಿ ಸ್ವತಂತ್ರ, ನಿಷ್ಪಕ್ಷಪಾತ ಹಾಗೂ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು ಎಂದರು. ಆಯೋಗದ ಸ್ವಾಯತ್ತತೆಗೆ ಧಕ್ಕೆಯಾದರೆ ಪ್ರಜಾಪ್ರಭುತ್ವದ ಮೇಲಿನ ನಂಬಿಕೆ ಕುಗ್ಗಲಿದೆ ಎಂದು ಹೇಳಿದರು.

ಎಸ್‌ಐಆರ್ ಸೇರಿದಂತೆ ಮತದಾರರ ಸೇರ್ಪಡೆ, ಹೆಸರುಗಳ ಅಳಿಸುವಿಕೆ ಹಾಗೂ ದತ್ತಾಂಶ ನಿರ್ವಹಣೆಗೆ ಸಂಬಂಧಿಸಿದ ಕೆಲವು ನಿರ್ಧಾರಗಳ ಕುರಿತು ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಆಕ್ಷೇಪ ದಾಖಲಿಸಿರುವ ವರದಿಗಳಿವೆ ಎಂದು ಸಿದ್ದರಾಮಯ್ಯ ಹೇಳಿದರು. ಈ ಬಗ್ಗೆ ರಾಷ್ಟ್ರಪತಿಗಳು ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಹೊರಗುಳಿಯದಂತೆ ಚುನಾವಣಾ ಆಯೋಗ ಕ್ರಮವಹಿಸಬೇಕು. ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆದಿದೆ ಎಂದು ರಾಹುಲ್ ಗಾಂಧಿ ಆರೋಪಿಸಿ ಆಯೋಗಕ್ಕೆ ಪತ್ರ ಬರೆದಿರುವುದನ್ನೂ ಉಲ್ಲೇಖಿಸಿದ ಸಿದ್ದರಾಮಯ್ಯ, ಮತದಾರರ ಹಕ್ಕು ಹಾಗೂ ಚುನಾವಣಾ ಪ್ರಕ್ರಿಯೆಯ ಕುರಿತ ಪ್ರಶ್ನೆಗಳಿಗೆ ಕೇಂದ್ರ ಸರ್ಕಾರ ಉತ್ತರಿಸಬೇಕು ಎಂದು ಆಗ್ರಹಿಸಿದರು.

ಆಯೋಗದೊಳಗಿನ ಆಕ್ಷೇಪಗಳ ವರದಿ ಕುರಿತು ಚುನಾವಣಾ ಆಯೋಗವು, ಸದಸ್ಯರು ಆಂತರಿಕ ಚರ್ಚೆಯಲ್ಲಿ ವಿಭಿನ್ನ ಅಭಿಪ್ರಾಯ, ಸಲಹೆ ಅಥವಾ ಆಕ್ಷೇಪ ವ್ಯಕ್ತಪಡಿಸುವುದು ಸಾಮಾನ್ಯ ಪ್ರಕ್ರಿಯೆಯಾಗಿದ್ದು, ಎಸ್‌ಐಆರ್ ಸೇರಿದಂತೆ ಎಲ್ಲ ಅಂತಿಮ ನಿರ್ಧಾರಗಳನ್ನು ಮೂವರು ಆಯುಕ್ತರ ಸರ್ವಾನುಮತದೊಂದಿಗೆ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದೆ.



ಬೆಂಗಳೂರು ನಗರದ ಲಕ್ಕಸಂದ್ರದಲ್ಲಿರುವ ಕಿದ್ವಾಯಿ ಸ್ಮಾರಕ ಗಂಥಿಶಾಸ್ತ್ರ ಸಂಸ್ಥೆಯ (ಕಿದ್ವಾಯಿ ಮೆಮೋರಿಯಲ್ ಇನ್‌ಸ್ಟಿಟ್ಯೂಟ್ ಆಫ್ ಆಂಕಾಲಜಿ) ಮುಂಭಾಗ ಸರಕು ಸಾಗಣೆ ವಾಹನ ಅಪಘಾತಕ್ಕೀಡಾದ ಪರಿಣಾಮ ಗುರುವಾರದಂದು ಸಂಚಾರ ಅಸ್ತವ್ಯಸ್ತಗೊಂಡ ದೃಶ್ಯ.

# ‘ಮೇಲ್ಮನೆಯ 4 ಕ್ಷೇತ್ರದಲ್ಲಿ ಒಗ್ಗೂಡಿ ಚುನಾವಣೆ ಎದುರಿಸಲು ನಿರ್ಧಾರ’

● ವಿಕ್ರಮ ವಾಹಿನಿ । ಬೆಂಗಳೂರು

ಶಿಕ್ಷಕರ ಕ್ಷೇತ್ರ ಹಾಗೂ ಎರಡು ಪದವೀಧರ ಕ್ಷೇತ್ರದ ವಿಧಾನ ಪರಿಷತ್ತಿನ ಚುನಾವಣೆ ನಡೆಯಲಿದ್ದು, ಎಲ್ಲ 4 ಕ್ಷೇತ್ರಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಒಟ್ಟಾಗಿ, ಒಂದುಗೂಡಿ ಚುನಾವಣೆ ಎದುರಿಸಲಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ನಗರದಲ್ಲಿ ಇಂದು ಬಿಜೆಪಿ– ಜೆಡಿಎಸ್ ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಧಾನ ಪರಿಷತ್ತಿನ ಚುನಾವಣೆ ಎದುರಿಸುವ ಸಂಬಂಧ ಭಾರತೀಯ ಜನತಾ ಪಾರ್ಟಿ ಹಾಗೂ ಜೆಡಿಎಸ್ ಪಕ್ಷದ ಎಲ್ಲಾ ಮುಖಂಡರ ವಿಶೇಷ ಸಭೆ ಕರೆದಿದ್ದೆವು. ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ ಜೀ, ಎಚ್.ಡಿ. ಕುಮಾರಸ್ವಾಮಿ, ಪಕ್ಷದ ಎಲ್ಲ ಮುಖಂಡರು, ಜಿಲ್ಲಾ ಅಧ್ಯಕ್ಷರು ಪ್ರಮುಖರು ಭಾಗವಹಿಸಿದ್ದಾಗಿ ವಿವರಿಸಿದರು.

ನಾಲ್ಕು ಕ್ಷೇತ್ರಗಳಲ್ಲಿ ಭಾರತೀಯ ಜನತಾ ಪಾರ್ಟಿ ಹಾಗೂ ಜೆಡಿಎಸ್ ಪಕ್ಷ ಒಟ್ಟಾಗಿ– ಒಂದಾಗಿ ಚುನಾವಣೆ ಎದುರಿಸಬೇಕು. ನಾಲ್ಕು ಕ್ಷೇತ್ರಗಳನ್ನೂ ನಾವು ಗೆಲ್ಲಬೇಕು. ಆ ನಿಟ್ಟಿನಲ್ಲಿ ಒಟ್ಟಾಗಿ ಹೋರಾಟ ಮಾಡಬೇಕು ಅಂತ ತೀರ್ಮಾನ ಮಾಡಲಾಗಿದೆ ಎಂದು ಹೇಳಿದರು. ಕ್ಷೇತ್ರವಾರು ಯಾರ್ಯಾರು ಜವಾಬ್ದಾರಿ ಹೊಂದಿರಬೇಕು ಎಂಬುದರ ಘೋಷಣೆಯನ್ನು ಮಾಡಿದ್ದೇವೆ ಎಂದರು.

**ಸಿಎಂ ಬಗ್ಗೆ ವಿಶ್ವಾಸ ಕಳಕೊಂಡ ಕಾಂಗ್ರೆಸ್ ಶಾಸಕರು**

ರಾಜ್ಯದ ಆಡಳಿತ ಪಕ್ಷದಲ್ಲಿ ಕಾಂಗ್ರೆಸ್ ಶಾಸಕರೇ ಮುಖ್ಯಮಂತ್ರಿಗಳ ಬಗ್ಗೆ ವಿಶ್ವಾಸ ಕಳಕೊಳ್ಳುತ್ತಿದ್ದಾರೆ. ಆಡಳಿತ ಪಕ್ಷದ ಶಾಸಕರೇ ಮುಖ್ಯಮಂತ್ರಿಗಳ ಬಗ್ಗೆ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ. ಮುಖ್ಯಮಂತ್ರಿಗಳಿಗೆ ಆಡಳಿತದ ಮೇಲೆ ಹಿಡಿತ ಸಿಗುತ್ತಿಲ್ಲ ಎಂದು ಟೀಕಿಸಿದರು.



**ವಿಧಾನ ಪರಿಷತ್ತಿನ ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಗಳ ನಾಲ್ಕೂ ಸ್ಥಾನಗಳಿಗೆ ಬಿಜೆಪಿ–ಜೆಡಿಎಸ್ ಒಗ್ಗಟ್ಟಿನಿಂದ ಚುನಾವಣೆ ಎದುರಿಸಲು ನಿರ್ಧರಿಸಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದರು. ಕ್ಷೇತ್ರವಾರು ಜವಾಬ್ದಾರಿಗಳನ್ನು ಹಂಚಿಕೆ ಮಾಡಿಕೊಂಡಿದ್ದು, ಮುಂದಿನ ದಿನಗಳಲ್ಲೂ ಎರಡೂ ಪಕ್ಷಗಳು ಒಟ್ಟಾಗಿ ಹೋರಾಟ ನಡೆಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ.**

**ಘೋಷಣೆಗೆ ಸೀಮಿತವಾದ ಸರ್ಕಾರ..**

ಹಣಕಾಸು ಇಲಾಖೆಯು ಬರೆದ ಪತ್ರದ ಮೂಲಕ ಇದೆಲ್ಲ ಜಗಜ್ಜಾಹೀರಾಗಿದೆ. ಖಜಾನೆಯಲ್ಲಿ ಹಣ ಇಲ್ಲ. ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರವು ಕೇವಲ ಘೋಷಣೆಗೆ ಮಾತ್ರ ಸೀಮಿತವಾಗಿದೆ ಎಂದು ಆರೋಪಿಸಿದರು. ಮುಂದಿನ ದಿನಗಳಲ್ಲಿ ಎರಡೂ ಪಕ್ಷಗಳು ಒಟ್ಟಾಗಿ ಒಂದಾಗಿ ಹೋರಾಟಗಳನ್ನು ಮಾಡುವುದು; ಯಾವ ರೀತಿ ಮುಂದೆ ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬರಬೇಕು ಎಂಬ ಬಗ್ಗೆ ಚರ್ಚಿಸಿದ್ದೇವೆ. ರಾಜ್ಯದಲ್ಲಿ ಎನ್.ಡಿ.ಎ. ಸರ್ಕಾರ ಅಧಿಕಾರಕ್ಕೆ ತರುವ ಬಗ್ಗೆಯೂ ನಾವು ಚರ್ಚೆ ಮಾಡಿದ್ದೇವೆ ಎಂದು ಹೇಳಿದರು.

ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಎರಡೂ ಪಕ್ಷಗಳ ಮುಖಂಡರು ಹಾಗೂ ಕಾರ್ಯಕರ್ತರು ಕ್ಷೇತ್ರವಾರು ಸಮನ್ವಯದಿಂದ ಕೆಲಸ ಮಾಡಬೇಕು ಎಂದು ಸಭೆಯಲ್ಲಿ ಒಮ್ಮತದ ನಿರ್ಧಾರ ಕೈಗೊಳ್ಳಲಾಗಿದೆ.

ರಾಜ್ಯದ ಪ್ರಸ್ತುತ ರಾಜಕೀಯ ಪರಿಸ್ಥಿತಿ, ಸಂಘಟನೆ ಬಲಪಡಿಸುವುದು ಹಾಗೂ ಮುಂದಿನ ದಿನಗಳಲ್ಲಿ ಬಿಜೆಪಿ–ಜೆಡಿಎಸ್ ನಡುವೆ ಸಮನ್ವಯ ಹೆಚ್ಚಿಸುವ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಯಿತು. ಎರಡೂ ಪಕ್ಷಗಳ ನಾಯಕರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಮೈತ್ರಿಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಲಾಗಿದೆ ಎಂದು ಅವರು ಹೇಳಿದರು.

# ಮೈಸೂರಿನಲ್ಲಿ 8 ತಿಂಗಳಲ್ಲಿ ರೂ 36 ಕೋಟಿ ಸೈಬರ್ ವಂಚನೆ

● ವಿಕ್ರಮ ವಾಹಿನಿ । ಮೈಸೂರು

ಮೈಸೂರು ನಗರ ಹಾಗೂ ಜಿಲ್ಲೆಯಲ್ಲಿ ಸೈಬರ್ ವಂಚನೆ ಪ್ರಕರಣಗಳು ಹೆಚ್ಚಾಗಿದ್ದು, ಕೇವಲ ಎಂಟು ತಿಂಗಳಲ್ಲಿ ಖದೀಮರು ರೂ 36 ಕೋಟಿ ಲಪಟಾಯಿಸಿದ್ದಾರೆ.

ವಿದ್ಯುತ್, ನೀರು, ಇಂಟರ್ನೆಟ್ ಬಿಲ್ ಪಾವತಿ ನೆಪದಲ್ಲಿ ಸಂಪರ್ಕ ಕಡಿತದ ಬೆದರಿಕೆ, ಆಕರ್ಷಕ ಹೂಡಿಕೆ ಯೋಜನೆಗಳ ಆಮಿಷ ಹಾಗೂ ಪೊಲೀಸರು, ಐಟಿ–ಇಡಿ ಅಧಿಕಾರಿಗಳೆಂದು ಹೆದರಿಸಿ ಹಣ ಪಡೆಯುವ ಪ್ರಕರಣಗಳು ವರದಿಯಾಗಿವೆ. ಸಾರ್ವಜನಿಕರು ಅಪರಿಚಿತ ಕರೆ, ಸಂದೇಶ ಹಾಗೂ ಆನ್‌ಲೈನ್ ಹೂಡಿಕೆಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

# ಬ್ರಾಹ್ಮಣ ಮಹಾಸಭಾದಿಂದ ವಿದ್ಯಾಗಣಪತಿ ಮಹೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ (ರಿ.) ವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ವಿದ್ಯಾಗಣಪತಿ ಮಹೋತ್ಸವವನ್ನು ಎರಡು ದಿನಗಳ ಕಾಲ ಆಯೋಜಿಸಲಾಗಿದೆ.

ಬನಶಂಕರಿ 2ನೇ ಹಂತದ 14ನೇ ಮುಖ್ಯರಸ್ತೆಯ ನಂ. 3070ರಲ್ಲಿರುವ "ಗಾಯತ್ರೀ ಭವನ"ದಲ್ಲಿ ಸೆಪ್ಟೆಂಬರ್ 29 ಮಂಗಳವಾರ ಮತ್ತು ಸೆಪ್ಟೆಂಬರ್ 30 ಬುಧವಾರ ಮಹೋತ್ಸವ ನಡೆಯಲಿದೆ.

ಸೆ.29 ರ ಮಂಗಳವಾರ:ಬೆಳಿಗ್ಗೆ 11.00 ಗಂಟೆಗೆ ಪೂಜೆ, ಬೆಳಿಗ್ಗೆ 12.30 ಗಂಟೆಗೆ ಮಹಾಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ. ಸಂಜೆ 6.30 ಗಂಟೆಗೆ ವಿದುಷಿ ಶ್ರೀಮತಿ ಅಮೃತವರ್ಷಿಣಿ ಅವರಿಂದ ಸಂಗೀತ ಕಾರ್ಯಕ್ರಮ, ಸಂಜೆ 7.30 ಗಂಟೆಗೆ ಸಾಧಕರಿಗೆ ಗೌರವ ಸನ್ಮಾನ, ರಾತ್ರಿ 8.30 ಗಂಟೆಗೆ ಪ್ರಸಾದ ವಿನಿಯೋಗ ಇರಲಿದೆ.

ಸೆ.30 ರ ಬುಧವಾರ ಬೆಳಿಗ್ಗೆ 11.30 ಗಂಟೆಗೆ ಪೂಜೆ, ಬೆಳಿಗ್ಗೆ 12.30 ಗಂಟೆಗೆ ಮಹಾಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ. ಸಂಜೆ 5.00 ಗಂಟೆಗೆ ಶ್ರೀ ವಿದ್ಯಾಗಣಪತಿಯ ಮೆರವಣಿಗೆ ಹಾಗೂ ವಿಸರ್ಜನೆ. ವಿಸರ್ಜನೆ ನಂತರ ಗಾಯತ್ರೀ ಭವನದಲ್ಲಿ ಕೈ ಊಟದ ವ್ಯವಸ್ಥೆ ಇರುತ್ತದೆ ಎಂದು ಮಹಾಸಭಾದ ಅಧ್ಯಕ್ಷರು, ಜಿಲ್ಲಾ ಪ್ರತಿನಿಧಿಗಳು, ಪದಾಧಿಕಾರಿಗಳು ಹಾಗೂ ಕಾರ್ಯಕಾರಿಣಿ ಸಮಿತಿ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —
ವಿಕ್ರಮ ವಾಹಿನಿ

# ಎಸ್ಐಆರ್ ಮುಂದಿಟ್ಟುಕೊಂಡು ರಾಹುಲ್ ಗಾಂಧಿ ನಾಟಕ

## “ಸೋಲಿನಿಂದ ಹತಾಶರಾಗಿರುವ ಕಾಂಗ್ರೆಸ್ ನಾಯಕರು ಚುನಾವಣಾ ಆಯೋಗದ ಮೇಲೆ ಗೂಬೆ ಕೂರಿಸುತ್ತಿದ್ದಾರೆ”


● ವಿಕ್ರಮ ವಾಹಿನಿ । ಬೆಂಗಳೂರು

ದೇಶದಲ್ಲಿ ಕಾಂಗ್ರೆಸ್ ನಿರಂತರ ಸೋಲು ಕಾಣುತ್ತಿರುವ ಹಿನ್ನೆಲೆಯಲ್ಲಿ ಅದರ ಹೊಣೆಯಿಂದ ತಪ್ಪಿಸಿಕೊಳ್ಳಲು ರಾಹುಲ್ ಗಾಂಧಿ ಅವರು ಎಸ್ಐಆರ್ ವಿಚಾರವನ್ನು ಮುಂದಿಟ್ಟುಕೊಂಡು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದರು.

ನಗರದಲ್ಲಿ ನಡೆದ ಬಿಜೆಪಿ–ಜೆಡಿಎಸ್ ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ರಾಹುಲ್ ಗಾಂಧಿ ಅವರ ನಾಯಕತ್ವದ ಬಗ್ಗೆಯೇ ಪ್ರಶ್ನೆಗಳು ಮೂಡಿವೆ.

ಅವರ ಅಪ್ರಬುದ್ಧ ನಾಯಕತ್ವದಿಂದ ಪಕ್ಷ ಸಂಕಷ್ಟಕ್ಕೆ ಸಿಲುಕಿದ್ದು, ಸೋಲಿನ ಹತಾಶೆಯಲ್ಲಿ ಕೇಂದ್ರ ಚುನಾವಣಾ ಆಯೋಗದ ಮೇಲೆ ಆರೋಪ ಮಾಡಲಾಗುತ್ತಿದೆ ಎಂದು ದೂರಿದರು.

ಎಸ್ಐಆರ್ ಸೇರಿದಂತೆ ವಿವಿಧ ವಿಚಾರಗಳನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಅವರು, ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಮಾಧ್ಯಮಗಳಲ್ಲಿ ಬಂದಿರುವ ವರದಿಗಳಂತೆ ಯಾವುದೇ ಏಕಪಕ್ಷೀಯ ನಿರ್ಧಾರ ಕೈಗೊಳ್ಳಲು ಅವಕಾಶವಿಲ್ಲ. ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ನ ನಿರ್ದೇಶನವೂ ಇದೆ ಎಂದರು.



**ಕೇರಳದ ವಿಚಾರ ಪ್ರಸ್ತಾಪ:** ಕೇರಳದಲ್ಲಿ ಎಸ್ಐಆರ್ ನಂತರ ಕಾಂಗ್ರೆಸ್ ಗೆಲುವು ಸಾಧಿಸಿದೆ. ಅಲ್ಲಿ ಎಸ್ಐಆರ್ ಸರಿಯಾಗಿದೆ, ಬೇರೆಡೆ ಸೋತಾಗ ಮಾತ್ರ ಸರಿಯಿಲ್ಲ ಎಂದು ರಾಹುಲ್ ಗಾಂಧಿ ವಾದಿಸುವುದು ಯಾವ ನ್ಯಾಯ? ಕೇರಳದಲ್ಲಿ ಎಸ್ಐಆರ್ ಅನ್ನು ಬೆಂಬಲಿಸಿದ ಕಾಂಗ್ರೆಸ್ ನಾಯಕರನ್ನು ರಾಹುಲ್ ಗಾಂಧಿ ಪಕ್ಷದಿಂದ ಹೊರಹಾಕುವರೇ ಎಂದು ಜೋಶಿ ಪ್ರಶ್ನಿಸಿದರು.

ಸೋಲಿನ ಹತಾಶೆಯ ಪರಾಕಾಷ್ಠೆಯಲ್ಲಿರುವ ರಾಹುಲ್ ಗಾಂಧಿ ತಮ್ಮ ಸೋಲಿಗೆ ಕಾರಣ ಹುಡುಕುತ್ತಾ ಚುನಾವಣಾ ಆಯೋಗದ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

**ಸಿದ್ದರಾಮಯ್ಯ ಪ್ರಮಾಣ ಮಾಡಲಿ:** ರಾಹುಲ್ ಗಾಂಧಿ ರಾಜೀನಾಮೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿರುವುದಾಗಿ ಚರ್ಚೆಯಾಗುತ್ತಿದೆ. ತಾನು ಹಾಗೆ ಹೇಳಿಲ್ಲ ಎನ್ನುವುದಾದರೆ ಸಿದ್ದರಾಮಯ್ಯ ಅವರು ಪ್ರಮಾಣ ಮಾಡಿ ಹೇಳಲಿ ಎಂದು ಪ್ರಲ್ಹಾದ್ ಜೋಶಿ ಸವಾಲು ಹಾಕಿದರು. ಸಿದ್ದರಾಮಯ್ಯ ಅವರನ್ನು ವಜಾಗೊಳಿಸಿದಂತೆ ರಾಹುಲ್ ಗಾಂಧಿ ಅವರನ್ನು ವಜಾಗೊಳಿಸಲು ಸಾಧ್ಯವಿಲ್ಲ. ಆದರೆ ಪಕ್ಷದ ನಾಯಕತ್ವದ ಹೊಣೆ ಹೊತ್ತಿರುವ ರಾಹುಲ್ ಗಾಂಧಿ ರಾಜೀನಾಮೆ ನೀಡಬೇಕು ಎಂಬುದು ತಮ್ಮ ನಿಲುವು ಎಂದು ಅವರು ಹೇಳಿದರು.

# ಕೆರೆ–ಉದ್ಯಾನಗಳ ಸಂರಕ್ಷಣೆಗೆ ಸೈಕಲ್ ಜಾಥಾ

● ವಿಕ್ರಮ ವಾಹಿನಿ । ಬೆಂಗಳೂರು


ಅಭಿವೃದ್ಧಿಯ ನೆಪದಲ್ಲಿ ಕೆರೆ ಮತ್ತು ಉದ್ಯಾನವನಗಳು ಆಳುವವರ ಕೈಗೆ ಸಿಲುಕಿ ನರಳುತ್ತಿರುವ ಅನುಮಾನದ ಬೆನ್ನಲ್ಲಿಯೇ ಇದೇ ಅಕ್ಟೋಬರ್ 4 ರಂದು ಕೆರೆ–ಉದ್ಯಾನವನಗಳ ಸಂರಕ್ಷಣೆಗಾಗಿ ಬೆಂಗಳೂರಿನಲ್ಲಿ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ.

ಇದೇ ಅಕ್ಟೋಬರ್ 4 ರಂದು ಕೆರೆಗಳು ಹಾಗೂ ಉದ್ಯಾನವನಗಳ ಸಂರಕ್ಷಣೆಗಾಗಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ‘ಸೈಕಲ್ ಜಾಥಾ’ ಆಯೋಜಿಸಲಾಗಿದ್ದು, ಅಂದು ಭಾನುವಾರ ಬೆಳಿಗ್ಗೆ 7 ಗಂಟೆಗೆ ಸಿಲ್ಕ್ ಬೋರ್ಡ್ ಜಂಕ್ಷನ್ ನಿಂದ ಹೆಬ್ಬಾಳ ಎಸ್ಟೀಮ್ ಮಾಲ್ ವರೆಗೆ ಈ ಜಾಥಾ ನಡೆಯಲಿದೆ. ‘ನಮ್ಮ ಕೆರೆ – ನಮ್ಮ ಉದ್ಯಾನ – ನಮ್ಮ ಜವಾಬ್ದಾರಿ’ ಎಂಬ ಘೋಷ ವಾಕ್ಯದಡಿ ನಡೆಯಲಿರುವ ಈ ಜಾಥಾದಲ್ಲಿ ಪರಿಸರ ಪ್ರೇಮಿಗಳು, ಸೈಕಲ್ ಸವಾರರು, ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಕೆರೆ ಉಳಿಸಿ, ಹಸಿರು ಬೆಳೆಸಿ ಎಂಬ ಸಂದೇಶ ಸಾರಲು ಈ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ 98863 23754 / 98450 55291 ಸಂಪರ್ಕಿಸಬಹುದು ಎಂದು ಆಯೋಜಕರು ತಿಳಿಸಿದ್ದಾರೆ.



# ಅ.1 ರಂದು ಎನ್.ಆರ್.ಕಾಲೋನಿಯಲ್ಲಿ ಅಂತರಾಷ್ಟ್ರೀಯ ಕಾಫಿ ದಿನಾಚರಣೆ



● ವಿಕ್ರಮ ವಾಹಿನಿ । ಬೆಂಗಳೂರು

ಕಾಫಿ ಯಾರಿಗೆ ತಾನೇ ಇಷ್ಟ ಇಲ್ಲ ಹೇಳಿ? ಅದು ಉದ್ಯಾನ ನಗರಿ ಬೆಂಗಳೂರಿನಂತಹ ಮಾಯಾ ನಗರಿಯಲ್ಲಿ ಕಾಫಿಗಾಗಿಯೇ ವಿಶೇಷವಾದ ಅಡ್ಡಗಳು ತಲೆ ಎತ್ತಿವೆ. ಇಂತಹ ಅಡ್ಡವನ್ನು ನೀವೊಮ್ಮೆ ನೋಡಿ, ಕಾಫಿ ಸವಿಯಬೇಕಾದರೆ ನಮ್ಮ ಬೆಂಗಳೂರಿನ ಎನ್.ಆರ್.ಕಾಲೋನಿಗೆ ಬರಬೇಕು.

ಇದೇ ಅಕ್ಟೋಬರ್ 1 ರಂದು ಅಂತರರಾಷ್ಟ್ರೀಯ ಕಾಫಿ ದಿನ ಆಚರಣೆ ಆಚರಿಸಲಾಗುತ್ತಿದೆ. ಇಲ್ಲಿನ ಎನ್.ಆರ್. ಕಾಲೋನಿಯಲ್ಲಿ ಕಾಫಿ ಹಂಚಿಕೊಳ್ಳುವ ಕಾರ್ಯಕ್ರಮಕ್ಕೆ ಸಿದ್ಧತೆಗಗಳು ನಡೆಯುತ್ತಿವೆ. "ಕಾಫಿ ಪರಿಹಾರದ ಭಾಗ – Coffee is Part of the Solution" ಎಂಬ ಘೋಷವಾಕ್ಯದಡಿ ಈ ಕಾರ್ಯಕ್ರಮ ನಡೆಯಲಿದ್ದು, ಜನಧ್ವನಿ ಸಂಸ್ಥೆ ಇದನ್ನು ಆಯೋಜಿಸಿದೆ.

ಬನ್ನಿ... ಒಂದು ಕಪ್ ಹಂಚಿಕೊಳ್ಳೋಣ ಎಂಬ ಆಶಯದೊಂದಿಗೆ ಬೆಳಿಗ್ಗೆ 10:30 ಗಂಟೆಗೆ ಸೌತ್ ಕಿಚನ್, ಎನ್. ಆರ್. ಕಾಲೋನಿಯಲ್ಲಿ ಕಾಫಿ ಪ್ರಿಯರ ಸಮ್ಮಿಲನ ನಡೆಯಲಿದೆ. ಅಸ್ಸಾಂತರ ಬೆಳೆಗಾರರ ಕನಸು – ನಮ್ಮ ದೈನಂದಿನ ಕಪ್ ಎಂಬ ಪರಿಕಲ್ಪನೆಯಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಎಲ್ಲರಿಗೂ ಮುಕ್ತ ಸ್ವಾಗತವಿದೆ ಎಂದು ಆಯೋಜಕರು ತಿಳಿಸಿದ್ದಾರೆ.

# ಕಾಂಗ್ರೆಸ್ ತನ್ನ ಸೋಲಿಗೆ ನೆಪ ಹುಡುಕುವುದನ್ನೇ ಕಾಯಕ ಮಾಡಿಕೊಂಡಿದೆ: ಸುರೇಶ್ ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು



ಕಾಂಗ್ರೆಸ್ ಪಕ್ಷವು ತನ್ನ ಸೋಲಿಗೆ ಸದಾ ಯಾವುದಾದರೂ ನೆಪ ಹುಡುಕುತ್ತಲೇ ಇರುತ್ತದೆ ಎಂದು ರಾಜಾಜಿನಗರ ಬಿಜೆಪಿ ಶಾಸಕ ಹಾಗೂ ಮಾಜಿ ಸಚಿವ ಎಸ್. ಸುರೇಶ್ ಕುಮಾರ್ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಯೂ ತನ್ನ ಸೋಲಿಗೆ ನೆಪ ಹುಡುಕುವ ಮತ್ತೊಂದು ಪ್ರಯತ್ನವಾಗಿದೆ ಎಂದು ಹೇಳಿದ್ದಾರೆ.

“ಜ್ಞಾನೇಶ್ ಕುಮಾರ್ ಮತ್ತು ಎಸ್ಐಆರ್ (SIR) ಪ್ರಕ್ರಿಯೆ ಆರಂಭವಾಗುವುದಕ್ಕೂ ಬಹಳ ಹಿಂದೆಯೇ ಕಾಂಗ್ರೆಸ್ ಸರಣಿ ಚುನಾವಣೆಗಳಲ್ಲಿ ಸೋಲು ಕಂಡಿದೆ ಎಂಬುದನ್ನು ಕಾಂಗ್ರೆಸ್ ಅರಿತುಕೊಳ್ಳಬೇಕು. ತನ್ನ ಸೋಲಿಗೆ ಚುನಾವಣಾ ಆಯೋಗ ಅಥವಾ ಎಸ್ಐಆರ್ ಅನ್ನು ದೂಷಿಸುವ ಬದಲು ಕಾಂಗ್ರೆಸ್ ಪ್ರಾಮಾಣಿಕ ಆತ್ಮಾವಲೋಕನ ಮಾಡಿಕೊಳ್ಳಬೇಕು,” ಎಂದು ಸುರೇಶ್ ಕುಮಾರ್ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷವು ಚುನಾವಣಾ ಆಯೋಗ, ಎಲೆಕ್ಟ್ರಾನಿಕ್ ವೋಟಿಂಗ್ ಯಂತ್ರ (EVM), ಚುನಾವಣಾ ಅಧಿಕಾರಿಗಳು ಹಾಗೂ ಎಸ್ಐಆರ್ ಸೇರಿದಂತೆ ಎಲ್ಲರನ್ನೂ ದೂಷಿಸುತ್ತದೆಯೇ ಹೊರತು, ತನ್ನದೇ ತಪ್ಪುಗಳನ್ನು ಒಪ್ಪಿಕೊಳ್ಳಲು ಸಿದ್ಧವಿಲ್ಲ ಎಂದು ಅವರು ಆರೋಪಿಸಿದ್ದಾರೆ.

“ಜ್ಞಾನೇಶ್ ಕುಮಾರ್ ವಿರುದ್ಧ ಕಾಂಗ್ರೆಸ್ ಇಂದು ನಡೆಸುತ್ತಿರುವ ಪ್ರತಿಭಟನೆ ಕೊನೆಗೆ ಸಂಪೂರ್ಣ ವ್ಯರ್ಥವಾಗುವ ದುಬಾರಿ ಕಸರತ್ತಾಗಿ ಪರಿಣಮಿಸಲಿದೆ,” ಎಂದು ಸುರೇಶ್ ಕುಮಾರ್ ಹೇಳಿದ್ದಾರೆ.

“ಆಗ ನಾವು ಯಾರನ್ನೂ ದೂಷಿಸಲಿಲ್ಲ. ಬದಲಾಗಿ ಆತ್ಮಾವಲೋಕನ ಮಾಡಿಕೊಂಡು, ಅಗತ್ಯ ತಿದ್ದುಪಡಿ ಕ್ರಮಗಳನ್ನು ಕೈಗೊಂಡೆವು. ತಾಳ್ಮೆ ಮತ್ತು ಸತತ ಪರಿಶ್ರಮದಿಂದ ಪಕ್ಷವನ್ನು ಹಂತ ಹಂತವಾಗಿ ಕಟ್ಟಿದೆವು. ಬಿಜೆಪಿ ವಿಶ್ವದ ಅತಿದೊಡ್ಡ ಪಕ್ಷವಾಗಿದೆ ಮತ್ತು ಸಕಾರಾತ್ಮಕ ಮತದಾನದ ಮೂಲಕ ಚುನಾವಣೆಗಳನ್ನು ಗೆಲ್ಲುತ್ತಿದೆ,” ಎಂದು ಸುರೇಶ್ ಕುಮಾರ್ ಹೇಳಿದ್ದಾರೆ.

# 2027ರ ವಿಶ್ವಕಪ್ ಕೊಹ್ಲಿಯ ಕೊನೆಯ ವಿಶ್ವಕಪ್!

● ವಿಕ್ರಮ ವಾಹಿನಿ । ಮುಂಬೈ

ಭಾರತ ಕ್ರಿಕೆಟ್ ತಂಡದ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಅವರು 2027ರಲ್ಲಿ ದಕ್ಷಿಣ ಆಫ್ರಿಕಾ, ಜಿಂಬಾಬ್ವೆ ಹಾಗೂ ನಮೀಬಿಯಾದಲ್ಲಿ ನಡೆಯಲಿರುವ ಏಕದಿನ ವಿಶ್ವಕಪ್ ತಮ್ಮ ಪಾಲಿನ ಕೊನೆಯ ವಿಶ್ವಕಪ್ ಆಗಿರಲಿದೆ ಎಂದು ತಿಳಿಸಿದ್ದಾರೆ. ಈ ಮೂಲಕ ಏಕದಿನ ಕ್ರಿಕೆಟ್‌ನಿಂದ ನಿವೃತ್ತಿಯ ಸುಳಿವು ನೀಡಿದ್ದಾರೆ.

ಜಿಯೋಸ್ಟಾರ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಕೊಹ್ಲಿ, ಭಾರತ ಪರ ತಾವು ಆಡಲಿರುವ ಕೊನೆಯ ವಿಶ್ವಕಪ್ ಇದಾಗಿದ್ದು, ಟ್ರೋಫಿ ಗೆಲ್ಲಲು ಸರ್ವಶಕ್ತಿಯನ್ನೂ ಬಳಸುವುದಾಗಿ ಹೇಳಿದ್ದಾರೆ. ವಿಶ್ವಕಪ್ ಗೆಲ್ಲುವುದೇ ತಮ್ಮ ಅಂತಿಮ ಗುರಿ ಎಂದು ತಿಳಿಸಿದ್ದಾರೆ.

ಈಗಾಗಲೇ ಟೆಸ್ಟ್ ಹಾಗೂ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿರುವ 37 ವರ್ಷದ ಕೊಹ್ಲಿ, ಸದ್ಯ ಏಕದಿನ ಮಾದರಿಯಲ್ಲಿ ಮಾತ್ರ ಭಾರತವನ್ನು ಪ್ರತಿನಿಧಿಸುತ್ತಿದ್ದಾರೆ. 2027ರ ವಿಶ್ವಕಪ್ ಅವರ ಐದನೇ ಏಕದಿನ ವಿಶ್ವಕಪ್ ಆಗಲಿದೆ. 2011ರಲ್ಲಿ ಭಾರತ ವಿಶ್ವಕಪ್ ಗೆದ್ದ ತಂಡದ ಭಾಗವಾಗಿದ್ದ ಕೊಹ್ಲಿ, 2023ರ ವಿಶ್ವಕಪ್‌ನಲ್ಲಿ ಭಾರತದ ಪರ ಪ್ರಮುಖ ಪಾತ್ರ ವಹಿಸಿದ್ದರು. ಇದೀಗ 2027ರ ವಿಶ್ವಕಪ್‌ನಲ್ಲಿ ಮತ್ತೊಮ್ಮೆ ಟ್ರೋಫಿ ಗೆಲ್ಲುವ ಗುರಿಯೊಂದಿಗೆ ಕಣಕ್ಕಿಳಿಯುವ ನಿರೀಕ್ಷೆಯಿದೆ.

# ಸುತ್ತೂರು ಶ್ರೀಕ್ಷೇತ್ರಕ್ಕೆ ಸದ್ಗುರು ಮಧುಸೂದನ ಸಾಯಿ ಭೇಟಿ

● ವಿಕ್ರಮ ವಾಹಿನಿ । ಮೈಸೂರು

ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಸುತ್ತೂರು ಶ್ರೀಕ್ಷೇತ್ರಕ್ಕೆ ಮುದ್ದೇನಹಳ್ಳಿ ಶ್ರೀ ಸತ್ಯಸಾಯಿ ಗ್ರಾಮದ ಸದ್ಗುರು ಶ್ರೀ ಮಧುಸೂದನ ಸಾಯಿಯವರು ಭೇಟಿ ನೀಡಿ, ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃಗದ್ದುಗೆಯಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಪೂಜೆ ಸಲ್ಲಿಸಿದ ಸದ್ಗುರು ಶ್ರೀ ಮಧುಸೂದನ ಸಾಯಿಯವರು ಜಗದ್ಗುರುಗಳ ಆಶೀರ್ವಾದ ಪಡೆದರು.



ಈ ಸಂದರ್ಭದಲ್ಲಿ ಸುತ್ತೂರು ಮಠದ ಕಿರಿಯ ಶ್ರೀಗಳಾದ ಶ್ರೀ ಜಯರಾಜೇಂದ್ರ ಸ್ವಾಮೀಜಿ, ವಿವಿಧ ಮಠಾಧೀಶರು, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಶ್ರೀ ಮಂಜು, ಕಾರ್ಯದರ್ಶಿ–2 ಶ್ರೀ ಶಿವಕುಮಾರ್, ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳ ಆಡಳಿತಾಧಿಕಾರಿ ಶ್ರೀ ಉದಯ್, ಸಹಾಯಕ ಆಡಳಿತಾಧಿಕಾರಿ ಜಿ.ಎಲ್. ತ್ರಿಪುರಾಂತಕ, ಸಹಾಯಕ ಸಂಯೋಜನಾಧಿಕಾರಿ ಶ್ರೀ ವೀರಭದ್ರಯ್ಯ ಸೇರಿದಂತೆ ಮಠದ ಸದ್ಭಕ್ತರು ಉಪಸ್ಥಿತರಿದ್ದರು.

# ಜ್ಞಾನೇಶ್ ಕುಮಾರ್ ವಿರುದ್ಧ ಕಾಂಗ್ರೆಸ್ ದ್ವೇಷ: ಕಾರಜೋಳ

● ವಿಕ್ರಮ ವಾಹಿನಿ । ವಿಜಯಪುರ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ದಲಿತ ಐಎಎಸ್ ಅಧಿಕಾರಿ ಎಂಬ ಕಾರಣಕ್ಕೆ ಕಾಂಗ್ರೆಸ್ ಅವರನ್ನು ಗುರಿಯಾಗಿಸಿಕೊಂಡು ಸಂವಿಧಾನಿಕ ಹುದ್ದೆಗೆ ಅವಮಾನ ಮಾಡುತ್ತಿದೆ ಎಂದು ಬಿಜೆಪಿ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಐಆರ್ ವಿಚಾರದಲ್ಲಿ ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ರಾಜಕೀಯವಾಗಿ ವಾಗ್ದಾಳಿ ನಡೆಸುತ್ತಿದೆ. ಜ್ಞಾನೇಶ್ ಕುಮಾರ್ ಅವರು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರ ರಾಜೀನಾಮೆಗೆ ಆಗ್ರಹಿಸುವ ಮೂಲಕ ಆಯೋಗದ ಸ್ವಾಯತ್ತತೆಯನ್ನು ಪ್ರಶ್ನಿಸಲಾಗುತ್ತಿದೆ ಎಂದು ಹೇಳಿದರು.

ಜ್ಞಾನೇಶ್ ಕುಮಾರ್ ಅವರ ವಿಚಾರದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಬೇಕು. ಕೇವಲ ರಾಹುಲ್ ಗಾಂಧಿ ಅವರ ಹೇಳಿಕೆಗಳನ್ನು ಪುನರುಚ್ಚರಿಸಬಾರದು ಎಂದು ಕಾರಜೋಳ ಆಗ್ರಹಿಸಿದರು. ಎಸ್ಐಆರ್ ವಿಷಯದಲ್ಲಿ ಕಾನೂನು ಮತ್ತು ನ್ಯಾಯಾಂಗ ಪ್ರಕ್ರಿಯೆಯನ್ನು ಎದುರಿಸುವ ಬದಲು ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ಜನರನ್ನು ಎತ್ತಿಕಟ್ಟುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರನ್ನು ರಾಜಕೀಯವಾಗಿ ಎದುರಿಸಲು ಕಾಂಗ್ರೆಸ್‌ಗೆ ಸಾಧ್ಯವಾಗುತ್ತಿಲ್ಲ. ಗಾಂಧಿ ಕುಟುಂಬದ ನಾಯಕರು ವಿದೇಶಿ ಶಕ್ತಿಗಳೊಂದಿಗೆ ಕೈಜೋಡಿಸಿ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂಬ ಆರೋಪವನ್ನೂ ಕಾರಜೋಳ ಮಾಡಿದರು. ಈ ಆರೋಪಗಳಿಗೆ ಕಾಂಗ್ರೆಸ್ ಪ್ರತಿಕ್ರಿಯೆ ನೀಡಿಲ್ಲ.

ಕಾರಜೋಳ ಅವರು, ಚುನಾವಣಾ ಆಯೋಗದ ವಿರುದ್ಧದ ಟೀಕೆಗಳು ಸಂವಿಧಾನಾತ್ಮಕ ಸಂಸ್ಥೆಯ ಮೇಲಿನ ಜನರ ನಂಬಿಕೆಗೆ ಧಕ್ಕೆ ತರುವಂತಾಗಬಾರದು ಎಂದು ಹೇಳಿದರು. ಎಸ್ಐಆರ್ ಕುರಿತು ಯಾವುದೇ ಆಕ್ಷೇಪಗಳಿದ್ದರೆ ಕಾನೂನುಬದ್ಧ ಮಾರ್ಗದಲ್ಲಿ ಪ್ರಶ್ನಿಸಬೇಕು ಎಂದು ಆಗ್ರಹಿಸಿದರು.

# ಸಿಲ್ಕ್ ಬೋರ್ಡ್ ಫ್ಲೈಓವರ್ ಕೆಳಭಾಗಕ್ಕೆ ಸಿಲ್ಕ್ ಥೀಮ್ ಚಿತ್ತಾರ

● ವಿಕ್ರಮ ವಾಹಿನಿ । ಬೆಂಗಳೂರು

ಸಿಲ್ಕ್ ಬೋರ್ಡ್ ಜಂಕ್ಷನ್‌ನ ಸೌಂದರ್ಯ ಹೆಚ್ಚಿಸುವ ಉದ್ದೇಶದಿಂದ ಹೊಸೂರು ಮಾರ್ಗದ ಫ್ಲೈಓವರ್ ಕೆಳಭಾಗವನ್ನು ಸ್ವಚ್ಛಗೊಳಿಸಿ, ರೇಷ್ಮೆ ಥೀಮ್‌ನ ಕಲಾಕೃತಿಗಳಿಂದ ಅಲಂಕರಿಸುವ ಕಾಮಗಾರಿಗೆ ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಚಾಲನೆ ನೀಡಿದರು.

ಜಿಬಿಎಯ ‘ಜಸ್ಟ್ ಕ್ಲೀನ್ ಬೆಂಗಳೂರು’ ಅಭಿಯಾನದಡಿ ಇಂಡಿಯಾ ರೈಸಿಂಗ್ ಟ್ರಸ್ಟ್ ಸಹಯೋಗದಲ್ಲಿ ಸಿಜಿಐ ಕಂಪನಿಯ ಸಿಎಸ್‌ಆರ್ ಯೋಜನೆಯ ಮೂಲಕ ಗೋಡೆಗಳ ಸೌಂದರ್ಯೀಕರಣ ಕೈಗೊಳ್ಳಲಾಗುತ್ತಿದೆ. ಸುಮಾರು 60ಕ್ಕೂ ಹೆಚ್ಚು ಸಿಜಿಐ ಸಂಸ್ಥೆಯ ನೌಕರರು ಸ್ವಯಂಸೇವಕರಾಗಿ ಪಾಲ್ಗೊಂಡು ಗೋಡೆಗಳಿಗೆ ಬಣ್ಣ ಹಚ್ಚಿ, ಕಲಾಕೃತಿಗಳನ್ನು ಮೂಡಿಸಿದರು.

ಸಿಲ್ಕ್ ಬೋರ್ಡ್ ಜಂಕ್ಷನ್‌ಗೆ ಪೂರಕವಾಗಿ ರೇಷ್ಮೆ ಸೀರೆಗಳ ಸಾಂಪ್ರದಾಯಿಕ ವಿನ್ಯಾಸಗಳಾದ ದೇವಸ್ಥಾನದ ಬಾರ್ಡರ್, ಮಾವಿನಕಾಯಿ ಮೋಟಿಫ್ ಹಾಗೂ ನವಿಲಿನ ಕಲಾಕೃತಿಗಳನ್ನು ಫ್ಲೈಓವರ್‌ನ ಗೋಡೆ ಮತ್ತು ಪಿಲ್ಲರ್‌ಗಳಲ್ಲಿ ಚಿತ್ರಿಸಲಾಗುತ್ತಿದೆ.



**ಡೈರಿ ಸರ್ಕಲ್‌ಗೂ ಸೌಂದರ್ಯೀಕರಣ**

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ರಾಮಲಿಂಗಾರೆಡ್ಡಿ ಹಾಗೂ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಅಭಿಯಾನದಲ್ಲಿ ಭಾಗವಹಿಸಿ ಸ್ವಯಂಸೇವಕರನ್ನು ಉತ್ತೇಜಿಸಿದರು.

ನಗರ ಸೌಂದರ್ಯೀಕರಣಕ್ಕೆ ಸಾರ್ವಜನಿಕ–ಖಾಸಗಿ ಸಹಭಾಗಿತ್ವದ ಇಂತಹ ಯೋಜನೆಗಳು ಮಾದರಿಯಾಗಿವೆ ಎಂದು ರಾಮಲಿಂಗಾರೆಡ್ಡಿ ಹೇಳಿದರು. ಸಿಲ್ಕ್ ಬೋರ್ಡ್ ಜತೆಗೆ ಡೈರಿ ಸರ್ಕಲ್ ಫ್ಲೈಓವರ್ ಕೆಳಭಾಗವನ್ನೂ ಇದೇ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಶಾಸಕರ ಅನುದಾನದಿಂದ ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದರು.



ಸಿಲ್ಕ್ ಬೋರ್ಡ್‌ನಿಂದ ಕೆ.ಆರ್. ಪುರಂವರೆಗಿನ ಹೊರವರ್ತುಲ ರಸ್ತೆಯ ಬೆಳ್ಳಂದೂರು, ಇಬ್ಲೂರು, ಆಗರ, ಎಚ್.ಎಸ್.ಆರ್. ಲೇಔಟ್ ಹಾಗೂ ಮಹದೇವಪುರದ ಫ್ಲೈಓವರ್ ಕೆಳಭಾಗಗಳಲ್ಲೂ ಹಂತ ಹಂತವಾಗಿ ಸಾರ್ವಜನಿಕ ಸ್ಥಳಗಳ ಪುನಶ್ಚೇತನ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಪಾರ್ಕಿಂಗ್, ಆಟದ ಜಾಗ, ವೆಂಡಿಂಗ್ ಝೋನ್**

ಫ್ಲೈಓವರ್ ಕೆಳಭಾಗವನ್ನು ಕೇವಲ ಬಣ್ಣ ಬಳಿದ ಸ್ಥಳವನ್ನಾಗಿ ಮಾಡದೆ, ಸಾರ್ವಜನಿಕರಿಗೆ ಸಂಪೂರ್ಣವಾಗಿ ಉಪಯುಕ್ತವಾಗುವಂತೆ ಅಭಿವೃದ್ಧಿಪಡಿಸಬೇಕು ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚಿಸಿದರು. ಅಡ್ಡಾದಿಡ್ಡಿ ವಾಹನ ನಿಲುಗಡೆ ತಪ್ಪಿಸಲು ವ್ಯವಸ್ಥಿತ ಪಾರ್ಕಿಂಗ್, ಆಟದ ಜಾಗ, ಪ್ರತ್ಯೇಕ ವೆಂಡಿಂಗ್ ಝೋನ್ ಹಾಗೂ ಸೂಕ್ತ ಬೆಳಕಿನ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಹಿಂದೆ ಸ್ಥಳ ಪರಿಶೀಲನೆ ನಡೆಸಿದ ವೇಳೆ ಕೆಸರು ಹಾಗೂ ಮಣ್ಣಿನಿಂದ ಕೂಡಿದ್ದ ಜಾಗವನ್ನು ತಕ್ಷಣ ಸ್ವಚ್ಛಗೊಳಿಸಿ ಸಮತಟ್ಟು ಮಾಡುವಂತೆ ಸೂಚಿಸಲಾಗಿತ್ತು. ಅದರಂತೆ ಸ್ಥಳವನ್ನು ಸ್ವಚ್ಛಗೊಳಿಸಲಾಗಿದ್ದು, ಮುಂದಿನ ಹಂತದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲಾಗುವುದು.

ಸಿಲ್ಕ್ ಬೋರ್ಡ್ ಪ್ರಮುಖ ಜಂಕ್ಷನ್ ಆಗಿರುವುದರಿಂದ ಬಸ್ ಹಾಗೂ ಮೆಟ್ರೋಗಾಗಿ ಕಾಯುವ ಪ್ರಯಾಣಿಕರ ಅನುಕೂಲಕ್ಕಾಗಿ ಆಸನಗಳ ವ್ಯವಸ್ಥೆ ಹಾಗೂ ಸುಸಜ್ಜಿತ ಫುಟ್‌ಪಾತ್ ಕಲ್ಪಿಸಲಾಗುವುದು ಎಂದು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಬೊಮ್ಮನಹಳ್ಳಿ ವಲಯದ ಮುಖ್ಯ ಎಂಜಿನಿಯರ್ ಮಾಲತಿ, ಸ್ವಚ್ಛ ಬೆಂಗಳೂರು–ಜಿಬಿಎ ರಾಯಭಾರಿ ಹಾಗೂ ಇಂಡಿಯಾ ರೈಸಿಂಗ್ ಟ್ರಸ್ಟ್‌ನ ಅರುಣ್ ಪೈ, ವಿನ್ಯಾಸಕಾರ ಅನಿರುದ್ಧ ಅಭ್ಯಂಕರ್ ಸೇರಿದಂತೆ ಪಾಲಿಕೆಯ ಅಧಿಕಾರಿಗಳು ಹಾಗೂ ಎಂಜಿನಿಯರ್‌ಗಳು ಉಪಸ್ಥಿತರಿದ್ದರು.

# ಹೆಚ್.ಡಿ.ಕೆ. ಮನವೊಲಿಕೆ; ಪೊಲೀಸ್ ಭವನದ ಧರಣಿ ಹಿಂಪಡೆದ ಬಿಡದಿ ರೈತ ಮಹಿಳೆಯರು

● ವಿಕ್ರಮ ವಾಹಿನಿ । ರಾಮನಗರ

ಬಿಡದಿ ಉಪನಗರ ಯೋಜನೆ ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದ ಭೈರಮಂಗಲ ಭಾಗದ ರೈತರು ಹಾಗೂ ರೈತ ಮಹಿಳೆಯರು, ತಮ್ಮ ಮೇಲೆ ನಡೆದ ಪೊಲೀಸ್ ದೌರ್ಜನ್ಯ ಖಂಡಿಸಿ ಚನ್ನಪಟ್ಟಣದ ಪೊಲೀಸ್ ಭವನದಲ್ಲಿ ನಡೆಸುತ್ತಿದ್ದ ಧರಣಿಯನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಮನವೊಲಿಕೆಯ ಬಳಿಕ ಶನಿವಾರ ಹಿಂಪಡೆದರು.

ಬಿಡದಿ ಉಪನಗರ ಯೋಜನೆ ವಿರೋಧಿಸಿ ಭೈರಮಂಗಲ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ರೈತರು ಕಳೆದ 568 ದಿನಗಳಿಂದ ಭೈರಮಂಗಲ ವೃತ್ತದಲ್ಲಿ ಧರಣಿ ನಡೆಸುತ್ತಿದ್ದು, ಕಳೆದ ಐದು ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರು.

ಶುಕ್ರವಾರ ಪೆಂಡಾಲ್ ಹಾಕಿಕೊಂಡು ಉಪವಾಸ ಮುಂದುವರಿಸಲು ಮುಂದಾದ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದಿದ್ದರು.



ಇದನ್ನು ಖಂಡಿಸಿ ರೈತರು ಪೊಲೀಸ್ ಭವನದಲ್ಲಿ ಧರಣಿ ಆರಂಭಿಸಿದ್ದರು. ವಿಷಯ ತಿಳಿದ ಬಳಿಕ ಪೊಲೀಸ್ ಭವನಕ್ಕೆ ತೆರಳಿದ ಕುಮಾರಸ್ವಾಮಿ, ಪ್ರತಿಭಟನಾನಿರತ ರೈತರೊಂದಿಗೆ ಮಾತುಕತೆ ನಡೆಸಿ ಸಾಂತ್ವನ ಹೇಳಿದರು.

**ಪೊಲೀಸರ ವಿರುದ್ಧ ಆಕ್ರೋಶ:** ಈ ವೇಳೆ ರೈತ ಮಹಿಳೆಯರು ತಮ್ಮ ಮೇಲೆ ಪೊಲೀಸರು ಅಮಾನುಷವಾಗಿ ವರ್ತಿಸಿದ್ದು, ಹಲವರಿಗೆ ಗಾಯಗಳಾಗಿವೆ. ಓರ್ವ ಮಹಿಳೆ ಪ್ರಜ್ಞಾಹೀನಳಾಗಿ ಆಸ್ಪತ್ರೆಗೆ ದಾಖಲಾಗುವಂತಾಯಿತು ಎಂದು ಕುಮಾರಸ್ವಾಮಿ ಅವರ ಬಳಿ ಅಳಲು ತೋಡಿಕೊಂಡರು. ಮಹಿಳೆಯರ ಅಹವಾಲು ಆಲಿಸಿದ ಸಚಿವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

**ರೈತರ ಭೂಮಿ ವಶಕ್ಕೆ ಅವಕಾಶವಿಲ್ಲ:** ತಾನು ಯಾವುದೇ ಪಕ್ಷದ ಪರವಾಗಿ ಬಂದಿಲ್ಲ. ರೈತರ ಹಿತಾಸಕ್ತಿಗಾಗಿ ಮಾತ್ರ ಮಧ್ಯಪ್ರವೇಶಿಸಿದ್ದೇನೆ ಎಂದು ಕುಮಾರಸ್ವಾಮಿ ಹೇಳಿದರು. ರೈತರ ಹೋರಾಟಕ್ಕೆ ಬೆಂಬಲವಿದ್ದು, ಮಹಿಳೆಯರು ಉಪವಾಸ ಸತ್ಯಾಗ್ರಹ ಮುಂದುವರಿಸದೆ ಶಾಂತಿಯುತವಾಗಿ ಪ್ರತಿಭಟನೆ ನಡೆಸುವಂತೆ ಮನವಿ ಮಾಡಿದ್ದೇನೆ ಎಂದರು.

ಬಿಡದಿ ಉಪನಗರ ಯೋಜನೆ ಹಾಗೂ ರೈತರ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಲು ಸರ್ಕಾರ ರಚಿಸಿದ್ದ ಸಮಿತಿ ಎಲ್ಲಿದೆ ಎಂದು ಪ್ರಶ್ನಿಸಿದ ಅವರು, ರೈತರಿಗೆ ಸೂಕ್ತ ಪರಿಹಾರ ನೀಡಿದರೆ ಭೂಮಿ ವಿಚಾರದಲ್ಲಿ ಅವರೊಂದಿಗೆ ಮಾತುಕತೆ ನಡೆಸುವುದಾಗಿ ಹೇಳಿದರು. ರೈತರ ಬದುಕಿನ ಪ್ರಶ್ನೆಯಾಗಿರುವ ಈ ವಿಚಾರವನ್ನು ಸರ್ಕಾರ ಸೂಕ್ಷ್ಮವಾಗಿ ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಶಾಸಕರಾದ ಎ. ಮಂಜುನಾಥ್, ರಾಜಾ ವೆಂಕಟಪ್ಪ ನಾಯಕ, ಮಾಜಿ ಸಚಿವರಾದ ಬಂಡೆಪ್ಪ ಕಾಶಂಪುರ್, ವೆಂಕಟರಾವ್ ನಾಡಗೌಡ, ಶಾಸಕರಾದ ಮಂಜೇಗೌಡ, ಎಂ.ಟಿ. ಕೃಷ್ಣಪ್ಪ, ಕೋಲಾರ ಸಂಸದ ಮಲ್ಲೇಶ್ ಬಾಬು, ಎಚ್.ಎಂ. ರಮೇಶ್‌ಗೌಡ, ಕೆ.ಎ. ತಿಪ್ಪೇಸ್ವಾಮಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 174,